ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

EMAIL : dairyadadaari@gmail.com ಸಂಪುಟ: 01 ಸಂಚಿಕೆ: 113

ಬೆಲೆ ರೂ : 2.00

ರಾಯಚೂರು

ಪುಟ: 4

RNI NO: KNKAN/25/A2795 ಗುರುವಾರ: 09–04–2026

## ಜಲಸಂರಕ್ಷಣಾ ಯೋಜನೆಗಳ ಫಲ: ಅಂತರ್ಜಲ ಮಟ್ಟ ಏರಿಕೆ : ಎನ್.ಎಸ್.ಬಿ

### ಜಲಸಂರಕ್ಷಣಾ ಯೋಜನೆ, ಉತ್ತಮ ಮಳೆಯ ಪರಿಣಾಮ: ನೀರಿನ ಸುಸ್ಥಿರ ಬಳಕೆಗೆ ಉತ್ತೇಜನ

**ಬೆಂಗಳೂರು, ಏ.8–** ಕಳೆದೆರಡು ವರ್ಷಗಳಲ್ಲಿ ಜಾರಿಗೊಳಿಸಿರುವ ಜಲಸಂರಕ್ಷಣಾ ಯೋಜನೆಗಳಿಂದಾಗಿ ರಾಜ್ಯದಲ್ಲಿ ಅಂತರ್ಜಲ ಮರುಪೂರಣ ಸಾಮರ್ಥ್ಯದಲ್ಲಿ ಗಣನೀಯವಾಗಿ ಏರಿಕೆಯಾಗಿದೆ. ಹಾಗೆಯೇ, ಉತ್ತಮ ಮಳೆ ಹಾಗೂ ಜನಜಾಗೃತಿ ಅಭಿಯಾನದ ಪರಿಣಾಮವಾಗಿ ಅಂತರ್ಜಲ ಬಳಕೆಯಲ್ಲಿ ಗಣನೀಯವಾದ ಇಳಿಕೆ ಕಂಡು ಬಂದಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ತಿಳಿಸಿದರು.

ವಿಕಾಸಸೌಧದ ತಮ ಕಚೇರಿಯಲ್ಲಿ 2025 ನೇ ಸಾಲಿನ ಅಂತರ್ಜಲ ಮೌಲ್ಯಮಾಪನ ವರದಿ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕಳೆದ ಸಾಲಿನಲ್ಲಿ ಆದಂತಹ ಉತ್ತಮ ಮಳೆ ಹಾಗೂ ಸರ್ಕಾರದ ಭದ್ರ ಜಲ ಸಂರಕ್ಷಣಾ ನೀತಿಗಳ ಯಶಸ್ಸಿನ ಫಲವಾಗಿ, ಕರ್ನಾಟಕವು ಅಂತರ್ಜಲ ಸೂಚ್ಯಂಕಗಳಲ್ಲಿ ಗಮನಾರ್ಹ ಸುಧಾರಣೆಯನ್ನು ದಾಖಲಿಸಿದೆ. ದತ್ತಾಂಶಗಳ ಪ್ರಕಾರ, ರಾಜ್ಯದಲ್ಲಿ ಒಟ್ಟಾರೆಯಾಗಿ ಅಂತರ್ಜಲ ಬಳಕೆಯು ಗಣನೀಯವಾಗಿ ಇಳಿಕೆಯಾಗಿದ್ದು, ವಾರ್ಷಿಕವಾಗಿ ಅಂತರ್ಜಲ ಮರುಪೂರಣ ಸಾಮರ್ಥ್ಯದಲ್ಲಿ ಭಾರಿ ಏರಿಕೆಯಾಗಿದೆ ಎಂದರು.

ಈ ವರದಿಯ ಪ್ರಕಾರ, ರಾಜ್ಯದ ಒಟ್ಟಾರೆ ಅಂತರ್ಜಲ ಪ್ರಮಾಣದ ಬಳಕೆಯು 2024ರಲ್ಲಿದ್ದ ಶೇ.68.44 ರಿಂದ 2025ರಲ್ಲಿ



**ಪ್ರಮುಖಾಂಶಗಳು:**

- ಅಂತರ್ಜಲ ಬಳಕೆ ಶೇ.68.44ರಿಂದ 66.49ಕ್ಕೆ ಇಳಿಕೆ
- ಮರುಪೂರಣ ಪ್ರಮಾಣ 19.28 ಬಿಸಿಎಂಗೆ ಏರಿಕೆ
- ಜಲಸಂರಕ್ಷಣಾ ಕಾಮಗಾರಿಗಳ ಸಂಖ್ಯೆ ಹೆಚ್ಚಳ
- ಗೃಹ ಬಳಕೆಯ ಅಂತರ್ಜಲ ಹೊರತೆಗೆಯುವಿಕೆ ಕಡಿತ
- ಜಲ ಜೀವನ್ ಮಿಷನ್ ಪರಿಣಾಮ ಸ್ಪಷ್ಟ
- ಮೇಲ್ಮೈ ನೀರಿನ ಬಳಕೆಗೆ ಜನರ ತಿರುಗುಮುಖ
- ಜಾಗೃತಿ ಅಭಿಯಾನದಿಂದ ಬಳಕೆ ನಿಯಂತ್ರಣ
- ನೈಸರ್ಗಿಕ ಸಂಪನ್ಮೂಲಗಳ ಮೇಲೆ ಒತ್ತಡ ಕಡಿತ

ಶೇ.66.49 ಕ್ಕೆ ಇಳಿಕೆಯಾಗಿರುವುದು ಕಂಡುಬಂದಿದೆ. ಈ ಸಕಾರಾತಕ ಇಳಿಕೆಯು, ರಾಜ್ಯದಾದ್ಯಂತ ಲಭ್ಯವಿರುವ ವಾರ್ಷಿಕ ಅಂತರ್ಜಲದಲ್ಲಿ ಸರಾಸರಿ ಶೇ.65 ರಷ್ಟನ್ನು ಮಾತ್ರ ಪ್ರಸ್ತುತ ಬಳಸಲಾಗುತ್ತಿದೆ ಎಂಬುದನ್ನು ಸೂಚಿಸುತ್ತದೆ. ಅಂತರ್ಜಲದ ಜವಾಬ್ದಾರಿಯುತ ಬಳಕೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಇಲಾಖೆಯು ನಿರಂತರವಾಗಿ ನಡೆಸುತ್ತಿರುವ ವ್ಯಾಪಕ ಪ್ರಯತ್ನಗಳು ಈ ಸಾಧನೆಗೆ ಪ್ರಮುಖ ಕಾರಣವಾಗಿದೆ. ಇದರಿಂದಾಗಿ ಸುಸ್ಥಿರ ಬಳಕೆ ಹಾಗೂ ನೈಸರ್ಗಿಕ ಅಂತರ್ಜಲ ಮೂಲಗಳ ಮೇಲಿನ ಒತ್ತಡ ಕಡಿಮೆಯಾಗಿದೆ.

ಇದಕ್ಕೆ ಪೂರಕವಾಗಿ, ಕರ್ನಾಟಕದ ಅಂತರ್ಜಲ ಮಟ್ಟದಲ್ಲಿ ಗಣನೀಯ ಸುಧಾರಣೆ ಕಂಡುಬಂದಿದೆ. 2ನೇಪುಟಕ್ಕೆ

## ಇಂದು ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ




**ಬೆಂಗಳೂರು,ಏ.8–** ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ದ್ವಿತೀಯ ಪಿಯುಸಿ ಪರೀಕ್ಷೆ–1ರ ಫಲಿತಾಂಶವನ್ನು ನಾಳೆ ಏಪ್ರಿಲ್ 9, 2026ರಂದು ಪ್ರಕಟವಾಗಲಿದೆ. ಮಂಡಳಿಯು ಸುದ್ದಿಗೋಷ್ಠಿ ಮೂಲಕ ಫಲಿತಾಂಶ ಪ್ರಕಟಿಸಲಿದ್ದು, ಶಿಕ್ಷಣ ಸಚಿವ ಮಧು ಬಂಗಾರಪ್ಪ ಫಲಿತಾಂಶ ಬಿಡುಗಡೆ ಮಾಡಲಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಏಪ್ರಿಲ್ 9ರಂದು ಫಲಿತಾಂಶ ಪ್ರಕಟವಾಗಲಿದೆ.

ಈ ವರ್ಷದ ದ್ವಿತೀಯ ಪಿಯುಸಿ ಪರೀಕ್ಷೆಗಳು ಫೆಬ್ರವರಿ 28ರಿಂದ ಮಾರ್ಚ್ 17ರವರೆಗೆ ರಾಜ್ಯಾದ್ಯಂತ ನಡೆದಿದ್ದವು. ಪರೀಕ್ಷೆಗೆ ಒಟ್ಟು 7,10,363 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ರಾಜ್ಯದ 1,217 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಯಶಸ್ವಿಯಾಗಿ ನಡೆಸಲಾಗಿತ್ತು.

ಮೊದಲಿಗೆ ಮಂಡಳಿಯು ಏಪ್ರಿಲ್ 7ರಂದು ಫಲಿತಾಂಶ ಪ್ರಕಟಿಸುವ ಸೂಚನೆ ನೀಡಿದ್ದರೂ, ಚುನಾವಣಾ ನೀತಿ ಸಂಹಿತೆಯ ಅನುಮತಿ ಪ್ರಕ್ರಿಯೆ ಹಿನ್ನೆಲೆಯಲ್ಲಿ ಫಲಿತಾಂಶ ಪ್ರಕಟಣೆ ಮುಂದೂಡಲಾಗಿತ್ತು .ಈಗ ಚುನಾವಣೆ ಅಯೋಗ ಫಲಿತಾಂಶ ಪ್ರಕಟಣೆಗೆ ಒಪ್ಪಿಗೆ ಸೂಚಿಸಿದ್ದು. ನಾಳೆ ಫಲಿತಾಂಶ ಹೊರಬೀಳಲಿದೆ. ವಿದ್ಯಾರ್ಥಿಗಳು ತಮ್ಮ ಫಲಿತಾಂಶವನ್ನು ಅಧಿಕೃತ ವೆಬ್‌ಸೈಟ್‌ಗಳಾದ karresults.nic.inಹಾಗೂ kseab.karnataka.gov.in ನಲ್ಲಿ ವೀಕ್ಷಿಸಬಹುದಾಗಿದೆ. ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳು ಕಾತರದಿಂದ ಕಾಯುತ್ತಿರುವ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟಣೆಗೆ ಕ್ಷಣಗಣನೆ ಆರಂಭವಾಗಿದೆ..

## ಶ್ರೀ ಅಡವಿ ಅಮರೇಶ್ವರ 72 ನೇ ಜಾತ್ರ ಮಹೋತ್ಸವ

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಅಡವಿ ಅಮರೇಶ್ವರ ಗ್ರಾಮದಲ್ಲಿನ ಸುವರ್ಣಗಿರಿ ವಿರಕ್ತಮಠ ಶ್ರೀ ಅಡವಿ ಅಮರೇಶ್ವರ ಮಠದಲ್ಲಿ ಮಂಗಳವಾರ ಸಂಜೆ 72 ನೇ ಜಾತ್ರ ಮಹೋತ್ಸವ ಹಾಗೂ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜೀವನದರ್ಶನ ಪ್ರವಚನ ಮಂಗಲ ಕಾರ್ಯಕ್ರಮ ಮತ್ತು ಗುರುವಂದನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ರಾಜ್ಯಾಧ್ಯಕ್ಷರಾದ ಶಂಕರ ಬಿದರಿ ನಿವೃತ್ತ ಡಿ.ಜಿ.ಪಿ. ಮಾತನಾಡಿ ರಾಯಚೂರು ಜಿಲ್ಲೆಯು ಅನೇಕ ಶರಣರನ್ನು ಸಂತರನ್ನು ಕಂಡ ಪುಣ್ಯಭೂಮಿಯಾಗಿದೆ ಈ ಭಾಗದಲ್ಲಿನ ಮಠಗಳು ಜನರಿಗೆ ಒಳ್ಳೆಯ ಸಂಸ್ಕಾರವನ್ನು ನೀಡಿ ಸನ್ಮಾರ್ಗದಲ್ಲಿ ನಡೆಯುವಂತೆ ಮಾಡುತ್ತಿವೆ ಈ ಭಾಗದಲ್ಲಿ ಅನೇಕ ರಾಜರು,ನವಾಬರು ಆಳಿದರು ಕೂಡ ಜನರು ಅವರನ್ನು ಇಂದು ಸಮ್ಮರಿಸುತ್ತಿಲ್ಲ ಅದ್ದರೆ ಯಾರು ಸಮಾಜಕ್ಕಾಗಿ ತಮ್ಮದೆಲ್ಲವನ್ನು ತ್ಯಾಗಮಾಡಿ ಪರಿಶ್ರಮದಿಂದ,ನಿಸ್ವಾರ್ಥವಾಗಿ, ಸನ್ಮಾರ್ಗದಲ್ಲಿ ಕರೆದುಕೊಂಡು ಹೋಗುತ್ತಾರೋ ಅವರನ್ನು ಸಮಾಜ ಕೂಡ ಸಮರ್ಪಣ ಭಾವದಿಂದ ಸ್ಮರಿಸಿಕೊಳ್ಳುತ್ತದೆ. ಮಠಗಳೆಂದರೆ ಶಾಲೆ,ಕಾಲೇಜುಗಳಿಂದ ಭವ್ಯವಾದ ಕಟ್ಟಡಗಳಿಂದಾಗುವುದಿಲ್ಲ ಮಠದಲ್ಲಿನ ಸ್ವಾಮಿಗಳ ಚಾರಿತ್ರದಿಂದ .ಸಂಸ್ಕಾರದಿಂದ




, ತಪಶಕ್ತಿಯಿಂದ ,ಪೂಜಾನಿಷ್ಠೆಯಿಂದ ಮಾತ್ರ ಮಠಗಳು ಅಭಿವೃದ್ದಿ ಹೊಂದುತ್ತವೆ. ಸಮಾಜದ ಅಭಿವೃದ್ದಿಗೆ ಮಠಗಳ ಕೋಡುಗೆ ಅಪಾರವಾಗಿದ್ದು. ಇಂದು ಮಠಗಳು ಸಮಾಜದಲ್ಲಿನ ದಲಿತರು, ಬಡವರು,ಶ್ರೀಮಂತರು,ಮಕ್ಕಳು,ಮಹಿಳೆಯರು ಸೇರಿದಂತೆ ಎಲ್ಲಾರನ್ನು ಸಮಾನವಾಗಿ ಅದಾರಿಸುತ್ತಿವೆ. ಭಕ್ತರಿಂದ ,ಭಕ್ತರಿಗಾಗಿ ಇರುವ ಕ್ಷೇತ್ರಗಳು ಮಠಗಳಾಗಿದು. ಶ್ರೀಮಠದ ಸ್ವಾಮಿಗಳು ಭಕ್ತರಿಂದ ಕ್ರೂಡಿಕರಿಸಿದ್ದನ್ನು ಭಕ್ತರ ಉದ್ದಾರಕ್ಕಾಗಿ ವಿನಿಯೋಗಿಸುತ್ತ ಬಂದಿದ್ದಾರೆ. ಶ್ರೀಮಂತಿಕೆ ಎಂದು ಕೂಡ ಶಾಶ್ವತವಾಗಿ ಉಳಿಯುವುದಿಲ್ಲ ನಮ್ಮಲಿನ ಆಚಾರ ,ವಿಚಾರಗಳು ಮಾತ್ರ ಶಾಶ್ವತವಾಗಿ ಉಳಿದುಕೊಳ್ಳುತ್ತವೆ. ಶ್ರೀ ಅಡವಿ ಅಮರೇಶ್ವರ ಮಠ ಮುಂದಿನ ದಿನಮಾನಗಳಲ್ಲಿ ಮಹಾತ್ತರವಾದ ಪುಣ್ಯಕ್ಷೇತ್ರವಾಗಿ ಬೆಳಗಲಿ ಎಂದು ತಿಳಿಸಿದರು.

ಬೂದುಗುಂಪ ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜೀವನದರ್ಶನ ಪ್ರವಚನ ನೀಡಿದರು.ಸಂಗೀತವನ್ನು ಅಮರೇಶ ಸಾಲಿಮಠ ಗವಾಯಿಗಳು ನೀಡಿದರು.

ಕಿಷ್ಕಿಂದ ವಿಶ್ವವಿದ್ಯಾಲಯ ವತಿಯಿಂದ ಗೌರವ ಡಾಕ್ಟರೇಟ್ ಪಡೆದ ಸುವರ್ಣಗಿರಿ ವಿರಕ್ತಮಠ ಒಳಬಳ್ಳಾರಿಯ ಶ್ರೀ ಡಾ.ಸಿದ್ದಲಿಂಗ 2ನೇಪುಟಕ್ಕೆ

## ಭೂಮಿ ಪೂಜೆ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ



ಧೈರ್ಯದ ದಾರಿ

**ರಾಯಚೂರು :** 2025–26ನೇ ಸಾಲಿನ ರಾಜ್ಯ ಹಣಕಾಸು ಆಯೋಗ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಅನಿಬರ್ಂಧಿತ ಯೋಜನೆಯಡಿ ವಿಕಲಚೇತನರಿಗೆ ಮೀಸಲಿಟ್ಟ ಅನುದಾನದಡಿ ವಿಕಲಚೇತನರ ಪುನರ್ವಸತಿ ಕೇಂದ್ರ ಕಟ್ಟಡ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮಕ್ಕೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಬುಧವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆವರಣದಲ್ಲಿ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ ಯೋಜನೆ ಅಧಿಕಾರಿ ಶರಣಬಸವರಾಜ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ವಿಜಯಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿ ಮನ್ಸೂರ್ ಅಹಮದ್, ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸರ್ಕಾರಿ ಜಮೀನು ಉಳಿವಿಗಾಗಿ ಸಿರುಗುಪ್ಪ ದಿಂದ ಬಳ್ಳಾರಿವರೆಗೆ ಪಾದಯಾತ್ರೆ : ಭೂಗಳ್ಳರ ವಿರುದ್ಧ ಸೂಕ್ತ ಕಾನೂನು ಕ್ರಮಕ್ಕೆ ಒತ್ತಯ

**ಸಿರುಗುಪ್ಪ, ಏ.08:** ತಾಲೂಕಿನ ಹಳೆಕೋಟೆ, ಸಿರಿಗೇರಿ, ದೇಶನೂರು ಗ್ರಾಮಗಳಲ್ಲಿ ನೂರಾರು ಎಕರೆ ಜಮೀನನ್ನು ಅಕ್ರಮವಾಗಿ ತಮ್ಮ ಸಂಬಂಧಿಕರ ಹೆಸರಿಗೆ ನೊಂದಣಿ ಮಾಡಿದ ಅಧಿಕಾರಿಗಳನ್ನು ವಜಾ ಮಾಡಬೇಕೆಂದು ಒತ್ತಾಯಿಸಿ ನಮ್ಮ ಸಂಘಟನೆ ವತಿಯಿಂದ ಏ.23 ರಿಂದ ಬಳ್ಳಾರಿಗೆ ಪಾದಯಾತ್ರೆ ಮಾಡಲಾಗುತ್ತದೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ವಿ.ಎಸ್ ಶಿವಶಂಕರ ಹೇಳಿದರು.

ನಗರದ ಶ್ರಮಿಕ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ 64 ಹಳಿಕೋಟೆ ಗ್ರಾಮದಲ್ಲಿ 7.93 ಎಕರೆ ಜಮೀನು ಪಹಣಿಯಲ್ಲಿರುವ ಪಟ್ಟಾದಾರರು ಸುಮಾರು 80 ರಿಂದ 90 ವರ್ಷಗಳಿಂದ ಯಾರೂ ವಾರಸುದಾರರಿಲ್ಲ ಹಾಲಿ ಜಮೀನಿನ ಸ್ವಲ್ಪ ಭಾಗ ಬೀಳು ಬಿದ್ದಿದ್ದು ಇದನ್ನು ಬಿಟ್ಟು ಇನ್ನುಳಿದ ಜಮೀನಿನಲ್ಲಿ ಎಸ್ಸಿ–ಎಸ್ಟಿ ಸಮುದಾಯದ ರೈತರು ಸಾಗುವಳಿ ಮಾಡುತಿದ್ದು.

ಇದರಲ್ಲಿ ಸುಮಾರು 68 ಎಕರೆ ಜಮೀನನ್ನು ಕೆಲವು ಭೂಗಳ್ಳರು ನಕಲಿ ದಾಖಲೆಗಳನ್ನು ಸೃಷ್ಟಿಸಿದ್ದು, ಕಾನೂನು ಬಾಹಿರವಾಗಿ ಸಿರುಗುಪ್ಪ ಸಬ್ ರಿಜಿಸ್ಟರ್ ಎಲ್ಲರೆಡ್ಡೆಪ್ಪ ವೀಲುನಾಮ ನೋಂದಣಿ ಮಾಡಿದ್ದಾರೆ. ಈ ವೀಲುನಾಮದ ಬಗ್ಗೆ ಹಳೆಕೋಟೆ ರೈತರು ತಕರಾರು ಅರ್ಜಿಸಲ್ಲಿಸಿದ್ದರಿಂದ, ತಹಶೀಲ್ದಾರರು ನೈಜತೆಯು ಬಗ್ಗೆ ಅನುಮಾನ ಇರುವುದರಿಂದ ತಿರಸ್ಕರಿಸಿದ್ದಾರೆ ಎಂದು ಹೇಳಿದ ಅವರು, ಸಿರಿಗೇರಿ ಗ್ರಾಮದ ಸರ್ವೇ ನಂ. 362 ಬಿ –46.51 ಎಕರೆ ಸರ್ಕಾರಿ ಇನಾಂ ಜಮೀನಾಗಿದ್ದು. ಈ ಜಮೀನಿಗೆ ಯಾರು ಕೂಡ ಪಟ್ಟಾದಾರರು ಇರುವುದಿಲ್ಲ. ಇನಾಂ. ರಿ ಗ್ರಾಂಟ್ ಸಹ ಆಗಿರುವುದಿಲ್ಲ. ಯಾರಿಗೂ ನಮೂನೆ 2 ರೈತವಾರಿ ಹಕ್ಕುಪತ್ರವನ್ನು ನೀಡಿರುವುದಿಲ್ಲ ಇದು ಸಂಪೂರ್ಣ ಸರ್ಕಾರಿ ಇನಾಂ ಜಮೀನಾಗಿರುತ್ತದೆ. ಅದರೂ ಸಹ ಎಲ್ಲರೆಡ್ಡೆಪ್ಪ ತಮ್ಮ ಕುಟುಂಬದ ಸದಸ್ಯರಿಗೆ ಈ ಜಮೀನನ್ನು ನೋಂದಣಿ ಮಾಡಿಸಿಕೊಳ್ಳಲು ಪ್ರಯತ್ನ ಮಾಡುತ್ತಿದ್ದು, ತಾಲೂಕಿನಲ್ಲಿ ಸುಮಾರು 130 ಎಕರೆಗೂ ಹೆಚ್ಚಿನ ಸರ್ಕಾರಿ ಜಮೀನನ್ನು



ತಮ್ಮ ಹೆಸರಿಗೆ ನೋಂದಣಿ ಮಾಡಿಸಿಕೊಳ್ಳಲು ಮುಂದಾಗಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ, ಸರ್ಕಾರಿ ಜಮೀನನ್ನು ಸರ್ಕಾರ ವಶಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ, ಸಹಾಯಕ ಆಯುಕ್ತರಿಗೆ ಅನೇಕ ಬಾರಿ ಮನವಿ ಸಲ್ಲಿಸಲಾಗಿದೆ.

ಕ್ರಮ ಕೈಗೊಂಡಿಲ್ಲ ಅಧಿಕಾರಿಗಳ ನಿರ್ಲಕ್ಷ್ಯ ಅನೇಕ ರೀತಿಯ ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಸರ್ಕಾರಿ ಜಮೀನಿನ ಅಕ್ರಮ ನೋಂದಣಿಯ ಬಗ್ಗೆ ಬಳ್ಳಾರಿಯಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಸಿರುಗುಪ್ಪ ಮತ್ತು ಕಂಪ್ಲಿ ಶಾಸಕರು ಮಾತನಾಡಿದ್ದಾರೆ. ಶಾಸಕರ ಗಮನಕ್ಕೂ ಈ ವಿಷಯವನ್ನು ತರಲಾಗಿದೆ.

ಸಿರುಗುಪ್ಪ ಸಬ್ ರಿಜಿಸ್ಟರ್‌ವಿರುದ್ಧ ಈಗಾಗಲೇ ಬಳ್ಳಾರಿಯ ಜಾರಿ ನಿರ್ದೇಶನಾಲಯದಲ್ಲಿ ದೂರು ದಾಖಲಿಸಲಾಗಿದೆ. ಲೋಕಾಯುಕ್ತರಿಗೂ ಈ ಬಗ್ಗೆ ದೂರನ್ನು ಸಲ್ಲಿಸಲಿದ್ದೇವೆ ಎಂದು ಹೇಳಿದ ಅವರು, ಏ.28ರಂದು ಸಿರುಗುಪ್ಪದ ಗಾಂಧಿ ವೃತ್ತದಿಂದ ಆರಂಭವಾಗಲಿರುವ ಪಾದಯಾತ್ರೆಯು ಏ.29ರಂದು ಬಳ್ಳಾರಿಗೆ ತಲುಪಲಿದ್ದು, ನಮ್ಮ ಬೇಡಿಕೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ತಿಳಿಸಿದರು.

ತಾಲೂಕು ಅಧ್ಯಕ್ಷ ವಿ.ಮಾರುತಿ, ಮುಖಂಡರಾದ ಎಂ.ದುರ್ಗಪ್ಪ, ಹೆಚ್. ಗಾಳಿಪ್ಪ, ಈರಣ್ಣ, ಓಬಳೇಶಪ್ಪ, ಹನುಮೇಶ, ಎಂ.ದುರುಗಪ್ಪ ಇನ್ನಿತರರು ಇದ್ದರು.

ಮೊದಲನೇ ಪುಟದಿಂದ

# ಜಲಸಂರಕ್ಷಣಾ ಯೋಜನೆಗಳ ಫಲ: ಅಂತರ್ಜಲ ಮಟ್ಟ ಏರಿಕೆ : ಎನ್.ಎಸ್.ಬಿ

ಒಟ್ಟು ವಾರ್ಷಿಕ ಅಂತರ್ಜಲ ಮರುಪೂರಣ ಪ್ರಮಾಣವು 2024 ರಲ್ಲಿದ್ದ 18.74ಬಿಲಿಯನ್ ಕ್ಯೂಬಿಕ್ ಮೀಟರ್‌ನಿಂದ 2025ರಲ್ಲಿ 19.28 ಬಿಸಿಎಂಗೆ ಗಮನಾರ್ಹವಾಗಿ ಏರಿಕೆಯಾಗಿದೆ. ಈ ಮರುಪೂರಣ ಪ್ರಮಾಣ ಹೆಚ್ಚಳದ ನೇರ ಪರಿಣಾಮವಾಗಿ, ವಾರ್ಷಿಕ ಲಭ್ಯವಿರುವ ಅಂತರ್ಜಲ ಸಂಪನ್ಮೂಲವು 16.88ಬಿಸಿಎಂನಿಂದ 17.41 ಬಿಸಿಎಂಗೆ ಏರಿಕೆಯಾಗಿದೆ.

ರಾಜ್ಯದಾದ್ಯಂತ ಮೂಲಸೌಕರ್ಯಗಳಲ್ಲಿ ಮೇಲ್ದರ್ಜೆಗೇರಿಕೆಯಾಗಿರುವುದು ಈ ಹೆಚ್ಚಳಕ್ಕೆ ಪ್ರಮುಖ ಕಾರಣವಾಗಿದೆ. ಜಲ ಸಂರಕ್ಷಣಾ ರಚನೆಗಳಿಂದ ಆಗುವ ಅಂತರ್ಜಲ ಮರುಪೂರಣ 2024ರಲ್ಲಿದ್ದ 0.81 ಬಿಸಿಎಂ ನಿಂದ 2025ರಲ್ಲಿ 1.04 ಬಿಸಿಎಂಗೆ ಏರಿಕೆಯಾಗಿದ್ದು, ಶೇ.29.11 ರಷ್ಟು ಜಿಗಿತ ಕಂಡಿದೆ.

ಕಳೆದ ಒಂದು ವರ್ಷದಲ್ಲಿ ರಾಜ್ಯದಾದ್ಯಂತ ಇಂತಹ ಜಲಸಂರಕ್ಷಣಾ ಕಾಮಗಾರಿಗಳ ಸಂಖ್ಯೆ 3,15,284 ರಿಂದ 3,94,060 ಕ್ಕೆ ಏರಿಕೆಯಾಗಿರುವುದು ಈ ಸಾಧನೆಗೆ ಪ್ರಮುಖ ಕಾರಣವಾಗಿದೆ ಎಂದು ಅವರು ಮಾಹಿತಿ ನೀಡಿದರು. ಗೃಹಬಳಕೆಯ ಅಂತರ್ಜಲ ಹೊರತೆಗೆಯುವಿಕೆ ಶೇ.0.58ರಷ್ಟು ಕಡಿತಗೊಂಡಿದ್ದು, 2024ರಲ್ಲಿದ್ದ 1,21,731 ಹೆಕ್ಟೆ?ರ್ ಮೀಟರ್ ನಿಂದ 2025ರಲ್ಲಿ 1,21,023 ಹೆ.ಮೀ.ಗೆ ಇಳಿಕೆಯಾಗಿದೆ.

ಜಲ ಜೀವನ್ ಮಿಷನ್ ಯೋಜನೆಯಡಿ ಜನರು ಅಂತರ್ಜಲದ ಬದಲಾಗಿ ಮೇಲೆ ನೀರಿನ ಮೂಲಗಳತ್ತ ಯಶಸ್ವಿಯಾಗಿ ಮುಖಮಾಡಿರುವುದು ಈ ಕಡಿತಕ್ಕೆ ಪ್ರಮುಖ ಕಾರಣವಾಗಿದೆ ಎಂದರು. ಸಣ್ಣ ನೀರಾವರಿ, ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿಗಳಾದ ಬಿ.ಕೆ ಪವಿತ್ರ, ಕೇಂದ್ರ ಅಂತರ್ಜಲ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಶ್ರೀ ಅಡವಿ ಅಮರೇಶ್ವರ 72 ನೇ ಜಾತ್ರ ಮಹೋತ್ಸವ

ಮಹಾಸ್ವಾಮಿಗಳಿಗೆ ಶ್ರೀಮಠ ಹಾಗೂ ಭಕ್ತರಿಂದ ಗುರುವಂದನೆ ಸಲ್ಲಿಸಲಾಯಿತು.

ಶ್ರೀಮಠದ ವತಿಯಿಂದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ರಾಜ್ಯಾಧ್ಯಕ್ಷರಾದ ಶಂಕರ ಬಿದರಿ ನಿವೃತ್ತ ಡಿ.ಜಿ.ಪಿ. ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶ್ರೀಮಠದ ಆಬಿವೃದ್ದಿಗೆ 21 ಲಕ್ಷ ರೂ ದೇಣಿಗೆ ನೀಡಿದ ಮಹಾದಾನಿಗಳಾದ ಹಿರಿಯ ವಕೀಲರಾದ ಸಿದ್ದಲಿಂಗಪ್ಪ ದಂಪತಿಗಳನ್ನು ಶ್ರೀ ಮಠದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಸುವರ್ಣಗಿರಿ ವಿರಕ್ತಮಠ ಯದ್ದಲದಿನ್ನಿ ಶ್ರೀ ಮಹಾಲಿಂಗ ಮಹಾಸ್ವಾಮಿಗಳು, ಕರೆಗುಡ್ಡ ಮಹಾಂತೇಶ್ವರ ಮಠದ ಮಹಾಂತಲಿಂಗ ಮಹಾಸ್ವಾಮಿಗಳು, ಸುವರ್ಣಗಿರಿ ವಿರಕ್ತಮಠ ಒಳ್ಳಬಳ್ಳಾರಿಯ ಕಿರಿಯ ಶ್ರೀಗಳಾದ ಬಸವಲಿಂಗ ಮಹಾಸ್ವಾಮಿಗಳು, ಸುವರ್ಣಗಿರಿ ವಿರಕ್ತಮಠ ಶ್ರೀ ಅಡವಿ ಅಮರೇಶ್ವರ ಮಠದ ಶ್ರೀ ತೋಂಟದಾರ್ಯ ಮಹಾಸ್ವಾಮಿಗಳು, ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ, ಮಾಜಿ ಕೃಷಿ ಬೆಲೆ ಅಯೋಗದ ಮಾಜಿ ಅಧ್ಯಕ್ಷರಾದ ಹನುಮನಗೌಡ ಬೆಳಗುರ್ಕಿ, ಮಾಜಿ ಜಿ.ಪಂ. ಅಧ್ಯಕ್ಷರಾದ ದೊಡ್ಡಬಸಪ್ಪಗೌಡ ಭೋಗವತಿ. ಸೇರಿದಂತೆ ಶ್ರೀಮಠದ ಭಕ್ತರು ಭಾಗವಹಿಸಿದರು.

# ರೈತರು ಯೂರಿಯಾ ರಸ ಗೊಬ್ಬರ ಖರೀದಿಸಲು ಎಫ್.ಐ.ಡಿ ಸಂಖ್ಯೆ ಕಡ್ಡಾಯ: ಕೃಷಿ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ

ಧೈರ್ಯದ ದಾರಿ

**ರಾಯಚೂರು:** ಪ್ರಸ್ತುತ ಮುಂಗಾರು ಹಂಗಾಮಿನಿಂದ ರೈತರು ಯೂರಿಯಾ ರಸಗೊಬ್ಬರ ಖರೀದಿ ಮಾಡಲು ಕೃಷಿ ಇಲಾಖೆಯು ಅಭಿವೃದ್ಧಿಪಡಿಸಿರುವ ಹೊಸ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ರೈತರ ಎಫ್.ಐ.ಡಿ. ಸಂಖ್ಯೆ ಮತ್ತು ಆಧಾರ ಕಾರ್ಡ್ ಬಳಸಿಕೊಂಡು ರೈತರು ಹೊಂದಿರುವ ಜಮೀನಿನ ವಿಸ್ತೀರ್ಣ ಮತ್ತು ಬೆಳೆದ ಬೆಳೆಗೆ ಅನುಗುಣವಾಗಿ ಎಷ್ಟು ಪ್ರಮಾಣದ ಯೂರಿಯಾ ಅಗತ್ಯವಿದೆಯೋ ಅಷ್ಟನ್ನು ಮಾತ್ರ ರೈತರು ಖರೀಧಿಸಲು ಹಾಗೂ ರಸಗೊಬ್ಬರ ಮಾರಾಟಗಾರರು ರೈತರಿಗೆ ವಿತರಿಸಲು ಅವಕಾಶವಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚೌವ್ಹಾಣ ಅವರು ತಿಳಿಸಿದ್ದಾರೆ.

ಇಲಾಖೆಯ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ಎಫ್.ಐ.ಡಿ ದಾಖಲಿಸಿ ಯೂರಿಯಾ ರಸಗೊಬ್ಬರ ವಿತರಿಸಬೇಕು. ಎಫ್.ಐ.ಡಿ. ಹೊಂದಿಲ್ಲದ ರೈತರು ತಕ್ಷಣವೇ ತಮ್ಮ ಪಹಣಿ, ಬ್ಯಾಂಕ್ ಪಾಸ್‌ಬುಕ್ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ಗ್ರಾಮ ಒನ್, ಸಾಮಾನ್ಯ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಎಫ್.ಐ.ಡಿ. ಸೃಜಿಸಿಕೊಳ್ಳಬೇಕು. ಈಗಾಗಲೇ ಎಫ್.ಐ.ಡಿ. ಹೊಂದಿರುವ ರೈತರು ತಮ್ಮ ಎಲ್ಲ ಸರ್ವೆ ನಂಬರ್‌ಗಳನ್ನು ಅದಕ್ಕೆ ಜೋಡಣೆ ಮಾಡಬೇಕು.

ರೈತರ ನೋಂದಣಿ ಮತ್ತು ಫಲಾನುಭವಿ ಮಾಹಿತಿ ವ್ಯವಸ್ಥೆ ಮೂಲಕ ರೈತರ ವೈಯಕ್ತಿಕ ವಿವರ, ಭೂಮಿ ವಿವರ, ಬ್ಯಾಂಕ್ ಖಾತೆ, ಆಧಾರ್ ಸಂಖ್ಯೆಯ ಮಾಹಿತಿಯನ್ನೊಳಗೊಂಡ ಎಫ್.ಐ.ಡಿ ಅನ್ವಯ ರೈತರ ಜಮೀನಿನ ವಿಸ್ತೀರ್ಣ ಹಾಗೂ ಬೆಳೆಗೆ ತಕ್ಕಂತೆ ಯೂರಿಯಾ ಪ್ರಮಾಣ ಅಗತ್ಯ ಇರುವಷ್ಟು ಮಾತ್ರ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ರೈತರಲ್ಲದವರು ಆಧಾರ್ ಬಳಸಿ / ಬೇರೆ ರೈತರ ಎಫ್. ಐ.ಡಿ ಬಳಸಿ ರಸಗೊಬ್ಬರ ಖರೀದಿಸಿ ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿ ಮಾಡುವ ಪ್ರಕರಣ ಕೃಷಿಯೇತರ ಚಟುವಟಿಕೆಗಳಿಗೆ ರಸಗೊಬ್ಬರ ಬಳಕೆ ಮಾಡುವಂತ ಪ್ರಕರಣ, ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು, ಕಾಳಸಂತೆಯಲ್ಲಿ ಮಾರಾಟ ಮಾಡುವುದು ಕಂಡು ಬಂದರೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು. ರಸಗೊಬ್ಬರಗಳನ್ನು ಹೆಚ್ಚಿನ ಬೆಲೆಗೆ ಮಾರಾಟ, ಅನಧಿಕೃತ ದಾಸ್ತಾನು / ಬಳಕೆಯ/ ಇತರೆ ಕಾನೂನು ಬಾಹಿರ ಚಟುವಟಿಗಳ ಬಗ್ಗೆ, ನಿಗಾವಹಿಸಲು ಜಿಲ್ಲಾ ಸಮಿತಿ ರಚನೆಯಾಗಿದ್ದು, ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಭೂಮಿಯ ಫಲವತ್ತತೆ ಹಾಗೂ ಮಣ್ಣಿನ ಆರೋಗ್ಯದ ಹಿತದೃಷ್ಟಿಯಿಂದ ರೈತರು ಅನಗತ್ಯವಾಗಿ ಹೆಚ್ಚಿನ ರಸಗೊಬ್ಬರ ಬಳಕೆ ಮಾಡದೆ ಬೆಳೆಗೆ ಅನುಗುಣವಾಗಿ ಮಿತವಾಗಿ ರಸಗೊಬ್ಬರ ಬಳಸಬೇಕೆಂಬ ಉದ್ದೇಶದಿಂದ ಇಲಾಖೆಯು ಈ ಕ್ರಮ ಜಾರಿಗೆ ತಂದಿದೆ. ಅಲ್ಲದೆ, ರೈತರು ಇತರೆ ಸಾವಯವ ಗೊಬ್ಬರ, ಜೈವಿಕ ಗೊಬ್ಬರ ಮತ್ತು ಹಸಿರೆಲೆ ಗೊಬ್ಬರಗಳನ್ನು ಬಳಸುವಂತೆ ತಿಳಿಸಿದೆ.

ಅಧಿಕೃತ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಕೆ-ಕಿಸಾನ್ ತಂತ್ರಾಂಶದಲ್ಲಿ ರೈತರ ಎಫ್.ಐ.ಡಿ. ನಮೂದಿಸಿ ಯೂರಿಯಾ ಮಾರಾಟ ಮಾಡಬೇಕು. ಒಂದು ವೇಳೆ 'ಓ' ಫಾರಂ ನವೀಕರಿಸದೆ ಮಾರಾಟ ಮಾಡಿದರೆ, ನಿಗದಿಪಡಿಸಿದ ಗರಿಷ್ಟ ಮಾರಾಟ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಿದರೆ ಅಥವಾ ಕೃಷಿಯೇತರ ಉದ್ದೇಶಗಳಿಗೆ ಸರಬರಾಜು ಮಾಡುವುದು. ಇತರ ಕಾನೂನುಬಾಹಿರ ಚುಟುವಟಿಕೆ ಕಂಡುಬಂದಲ್ಲಿ ಅಂತಹ ಮಾರಾಟಗಾರರ ವಿರುದ್ಧ ರಸಗೊಬ್ಬರ ನಿಯಂತ್ರಣ ಕಾಯ್ದೆ ಅನ್ವಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತರಬೇತಿ ಕಾರ್ಯಾಗಾರ

**ನವಲಗುಂದ,ಏ8 :** ಜನಗಣತಿ ಕಾರ್ಯದಿಂದ ದೇಶದ ಅಭಿವೃದ್ಧಿಗೆ ಯೋಜನೆ ರೂಪಿಸಲು ಸಹಕಾರಿಯಾಗುತ್ತದೆ. ಈ ಬಾರಿಯ ಜನಗಣತಿ ಸುಲಭ ಹಾಗೂ ಸರಳವಾಗಿದ್ದು, ಡಿಜಿಟಲ್ ಮೊಬೈಲ್ ಆಧಾರಿತ ಜನಗಣತಿಯಾಗಿದೆ ಎಂದು ಜನಗಣತಿ ನೋಡಲ್ ಅಧಿಕಾರಿ ಆರ್ ದೇವರಾಜ ಹೇಳಿದರು.

ಅವರು ಸ್ಥಳೀಯ ಶಂಕರ ಮಹಾವಿದ್ಯಾಲಯದಲ್ಲಿ ಭಾರತ ಜನಗಣತಿ 2027 ರ ನಿಮಿತ್ಯ ಮೇಲ್ವಿಚಾರಕರು ಹಾಗೂ ಗಣತಿದಾರರಿಗೆ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಏ.1 ರಿಂದ 15ರವರೆಗೆ ಸ್ವಯಂ ಗಣತಿಗೆ ಅವಕಾಶ ನೀಡಿದ್ದು, ಏ.16ರಿಂದ ಗಣತಿದಾರರು ಮನೆಬಾಗಿಲಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ. ಗಣತಿದಾರರು ಗೊಂದಲ ಮಾಡಿಕೊಳ್ಳದೆ ತರಬೇತಿದಾರರ ಮಾರ್ಗದರ್ಶನದ ಮೇರೆಗೆ ಮಾಹಿತಿ ಸಂಗ್ರಹಿಸಿ ಎಂದರು.ತಹಶೀಲ್ದಾರ ಸುಧೀರ ಸಾಹುಕಾರ ಮಾತನಾಡಿ ಡಿಜಿಟಲ್ ಜನಗಣತಿ ಕಾರ್ಯಕ್ರಮಕ್ಕೆ ತಾಲ್ಲೂಕು ಆಡಳಿತದಿಂದ ಗ್ರಾಮೀಣ ಭಾಗದಲ್ಲಿ 157 ಗಣತಿದಾರರು, 26 ಮೇಲ್ವಿಚಾರಕರು, 9 ತರಬೇತಿದಾರರು. ಹಾಗೂ ಕಾಯ್ದಿರಿಸಿದ 16 ಗಣತಿದಾರರು ಹಾಗೂ ಮೂವರು ಮೇಲ್ವಿಚಾರಕರು ಸೇರಿ ನೇಮಿಸಲಾಗಿದೆ'

ಎಲ್ಲ ಗಣತಿದಾರರು ಹಾಗೂ ಮೇಲ್ವಿಚಾರಕರು ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಪಡೆದು ಮೊಬೈಲ್‌ನಲ್ಲಿ ಸಾರ್ವಜನಿಕರಿಂದ ನಿಖರ ಮಾಹಿತಿ ಪಡೆದು 2027ರ ಜನಗಣತಿಯನ್ನು ಯಶಸ್ವಿಗೊಳಿಸಿ ಎಂದು ತಿಳಿಸಿದರು.ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವ್ಹಿ ಡಿ ರಂಗಣ್ಣವರ, ಎನ್ ವ್ಹಿ ಕುರವತ್ತಿಮಠ, ಜಿ ಎಂ ಮಾಕಣ್ಣವರ, ಉಪ ತಹಶೀಲ್ದಾರ ಗಣೇಶ ಚಳ್ಳಕೆರೆ, ಹನುಮರಡ್ಡಿ ದೇವರಡ್ಡಿ ಸೇರಿ ತರಬೇತಿದಾರರು, ಮೇಲ್ವಿಚಾರಕರು ಗಣತಿದಾರರು ಇದ್ದರು

# ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಿ: ಸಚಿವ ಡಾ.ಶರಣಪ್ರಕಾಶ್ ಆರ್.ಪಾಟೀಲ್



ಧೈರ್ಯದ ದಾರಿ

**ರಾಯಚೂರು :**ಜಿಲ್ಲೆಯ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಸೂಚಿಸಿದರು.

ಏಪ್ರಿಲ್ 08ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆಯ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಗ್ರಾಮ ಪಂಚಾಯತಿಗಳು, ನಗರ ಸ್ಥಳೀಯ ಸಂಸ್ಥೆಗಳು, ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಒತ್ತು ನೀಡಬೇಕು. ಯಾವುದೇ ಅಡೆತಡೆ ಇಲ್ಲದೆ ನೀರು ಪೂರೈಸಲು ಗಮನ ಹರಿಸಬೇಕು. ಸ್ಥಳೀಯವಾದ ಸಮಸ್ಯೆಗಳನ್ನು ತಮ್ಮ ಹಂತದಲ್ಲಿ ಪರಿಹರಿಸಿ ಗ್ರಾಮ ಪಂಚಾಯತ್ಗಳು ಮತ್ತು ಸ್ಥಳೀಯ ಸಂಸ್ಥೆಗಳ ಅನುದಾನ ಬಳಸಿಕೊಂಡು ಕಾಮಗಾರಿ ನಡೆಸಬೇಕು. ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅವರು ತಿಳಿಸಿದರು. ನೀರಿನ ಸಮಸ್ಯೆಗಳಿರುವ ಗ್ರಾಮಗಳ ಪಟ್ಟಿ ಮಾಡಿ, ಕೂಡಲೇ ಆಯಾ ಗ್ರಾಮಗಳಲ್ಲಿರುವ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿ ಕೊಳ್ಳುವುದು ಆಯಾ ತಾಲೂಕಿನ ತಹಶೀಲ್ದಾರ್, ತಾಲೂಕು ಪಂಚಾಯತ್ ಇಓ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಎಇಇ ಗಳದ್ದಾಗಿರುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಪ್ರತಿಯೊಂದು ತಾಲೂಕು ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿದ್ದರೆ, ಮತ್ತು ಸಮಸ್ಯೆಗಳನ್ನು ಬಗೆಹರಿಸಿರುವ ಬಗ್ಗೆ ಆಯಾ ಕ್ಷೇತ್ರದ ಶಾಸಕರ ಗಮನಕ್ಕೆ ತರಬೇಕು. ಮತ್ತು ಪ್ರತಿಯೊಂದು

ಮಾಹಿತಿಯನ್ನು ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ನೀಡಬೇಕು. ಪ್ರಸ್ತುತ ತುಂಗಭದ್ರಾ ಜಲಾಶಯದಲ್ಲಿ 17.26 ಟಿಎಂಸಿ ನೀರು ಸಂಗ್ರಹವಿದ್ದು, ಜೊತೆಗೆ 200 ಕ್ಯೂಸೆಕ್ ನೀರು ಒಳಹರಿವು ಇದ್ದು, ಸಿಂಧನೂರು ಮಾನ್ವಿ ಹಾಗೂ ರಾಯಚೂರು ತಾಲೂಕಿನ ಗ್ರಾಮಗಳಿಗೆ ಸಮರ್ಪಕ ನೀರು ಒದಗಿಸಬಹುದಾಗಿದೆ. ಜಲಾಶಯ ದಲ್ಲಿ ನೀರಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ಸಿಂಧನೂರು ತಾಲೂಕಿನಲ್ಲಿ 153 ಕೆರೆಗಳಿದ್ದು, ಅದರಲ್ಲಿ 28 ಕೆರೆಗಳು ಶೇ.51ರಿಂದ 75 ರಷ್ಟು ತುಂಬಿವೆ. 42 ಕೆರೆಗಳು ಶೇ.50 ರಷ್ಟು ತುಂಬಿದ್ದು, 84 ಕೆರಗೆಲೂ ಇನ್ನೂ ಶೇ.25ರಷ್ಟು ಸಹ ತುಂಬಿಲ್ಲ. ಕೂಡಲೇ ಎಲ್ಲಾ ಕೆರೆಗಳನ್ನು ಶೇ.100ರಷ್ಟು ಭರ್ತಿ ಮಾಡಬೇಕು. ಕಳೆದ ಬಾರಿ ನೀರಿನ ಸಮಸ್ಯೆಯನ್ನು ನೀಗಿಸಲು ಬಾಡಿಗೆಗೆ ಪಡೆದಿದ್ದ ಬೋರ್‌ವೆಲ್ ಮತ್ತು ಟ್ಯಾಂಕರ್‌ಗಳ ಬಾಡಿಗೆ ಪಾವತಿಸದಿರುವುದು ಗಮನಕ್ಕೆ ಬಂದಿದ್ದು, ಕೂಡಲೇ ಬಾಕಿ ಉಳಿದಿರುವ ಬಾಡಿಗೆ ಮೊತ್ತವನ್ನು ಆಯಾ ಬೋರ್‌ವೆಲ್ ಮತ್ತು ಟ್ಯಾಂಕರ್ ನೀಡಿದವರಿಗೆ ಪಾವತಿ ಮಾಡಬೇಕು. ಮತ್ತು ಈ ಬಾರಿ ಜಿಲ್ಲೆಯಲ್ಲಿ 35 ಗ್ರಾಮ ಪಂಚಾಯತ್‌ಗಳ 53 ಗ್ರಾಮಗಳಲ್ಲಿ 62 ಬೋವೆಲ್ ಗಳನ್ನು ಬಾಡಿಗೆ ಪಡೆಯಲಾಗಿದ್ದು, ಅಗತ್ಯವಿದ್ದರೆ, ಟ್ಯಾಂಕರ್‌ಗಳನ್ನು ಬಾಡಿಗೆ ಪಡೆದು ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ 782 ಆರ್ ಓ ಪ್ಲಾಂಟ್‌ಗಳಲ್ಲಿ 589 ಘಟಕಗಳು ಚಾಲ್ತಿಯಲ್ಲಿವೆ ಉಳಿದ ಪ್ಲಾಂಟ್‌ಗಳನ್ನು ಶೀಘ್ರವೇ ಆರಂಭಿಸಬೇಕು. ಪ್ರತಿಯೊಂದು ಪ್ಲಾಂಟ್ಗಳ ರಿಪೇರಿಗಾಗಿ 50 ಸಾವಿರದಂತೆ ವೆಚ್ಚ ಮಾಡಲು ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದು, ಅಗತ್ಯವಿದ್ದರೆ ಆಯಾ ಗ್ರಾಮ ಪಂಚಾಯತಿಯಿಂದ ವೆಚ್ಚ ಮಾಡಿ ಗ್ರಾಮಗಳಲ್ಲಿ ನೀರು ಶುದ್ದೀಕರಣ ಘಟಕಗಳನ್ನು ಆರಂಭಿಸಬೇಕು ಎಂದರು.

ಸಿಂಧನೂರು ನಗರಸಭೆ ವ್ಯಾಪ್ತಿಯಲ್ಲಿನ 31 ವಾರ್ಡ್‌ಗಳಲ್ಲಿ 8 ದಿನಕ್ಕೊಮ್ಮೆ ನೀರು ಸರಬರಾ ಜು ಮಾಡಲಾಗುತ್ತಿದ್ದು, ಮುದಗಲ್ ನಲ್ಲಿ 10 ದಿನಕ್ಕೊಮ್ಮೆ, ಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ 8 ದಿನಕ್ಕೊಮ್ಮೆ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ಕೂಡಲೇ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಜನರಿಗೆ ಸಮರ್ಪಕವಾಗಿ ನೀರನ್ನು ಒದಗಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕಯಗೊಳ್ಳಬೇಕು ಎಂದರು.

ಇದೇ ವೇಳೆ ನಗರ ಶಾಸಕ ಡಾ.ಶಿವರಾಜ ಪಾಟೀಲ್ ಮಾತನಾಡಿ, ರಾಯಚೂರು ನಗರ ವ್ಯಾಪ್ತಿಯಲ್ಲಿ ಅಂತರ್ಜಲ ಮೂಲದಿಂದ ಮಾತ್ರ ಕುಡಿಯುವ ನೀರನ್ನು ಪಡೆಯಬಹುದಾಗಿದ್ದು, ಕಳೆದ ಬಾರಿ ನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ 14 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಬೋರ್‌ವೆಲ್ ಮತ್ತು ಟ್ಯಾಂಕರ್‌ಗಳನ್ನು ಬಾಡಿಗೆ ಪಡೆಯಲಾಗಿತ್ತು. ಅದಕ್ಕಾಗಿ 50 ಲಕ್ಷ ನೀಡಲಾಗುವುದು ಎಂದು ಹೇಳಲಾಗಿತ್ತು. ಆದರೆ ಈವರೆಗೆ ಕೇವಲ 6-7 ಲಕ್ಷ ಮಾತ್ರ ಬಿಡುಗಡೆ ಮಾಡಲಾಗಿದೆ. ಉಳಿದ ಬಾಡಿಗೆ ಮೊತ್ತವನ್ನು ನೀಡಿಲ್ಲ. ಹಳ್ಳಿಗಳಿಗೆ ಹೇಗೆ ಮುಖ ಹೊತ್ತು ಹೋಗಬೇಕು. ಮೊದಲ ಆದ್ಯತೆಯಾಗಿ ಟ್ಯಾಂಕರ್ ಮತ್ತು ಬೋರ್‌ವೆಲ್ ಬಾಡಿಗೆ ಪಡೆದವರಿಗೆ ಬಾಡಿಗೆ ಹಣವನ್ನು ಪಾವತಿ ಮಾಡಬೇಕು ಎಂದು ತಿಳಿಸಿದರು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಕುಡಿಯುವ ನೀರಿನ ಸಮಸ್ಯೆಯ ಕುರಿತು ಮಾಹಿತಿ ನೀಡಲು ಸಾರ್ವಜನಿಕರಿಗಾಗಿ ಸಹಾಯವಾಣಿ ಆರಂಭಿಸಲಾಗಿದೆ. ಆದರೆ ಸರಿಯಾಗಿ ಸ್ಪಂದನೆ ಸಿಗುತ್ತಿಲ್ಲ ಎಂಬ ದೂರುಗಳಿವೆ. ಸಾರ್ವಜನಿಕರು ಕುಡಿಯುವ ನೀರಿನ ಕುರಿತು ಮಾಹಿತಿ ನಿಡಿದಾಗ ಅದಕ್ಕೆ ಸಂಬಂಧಪಟ್ಟ ನೋಡೆಲ್ ಅಧಿಕಾರಿಗಳು ಮತ್ತು ಸಹಾಯವಾಣಿ ಸಿಬ್ಬಂದಿ ಸ್ಪಂಧಿಸಬೇಕು ಎಂದರು.

ಮಾನ್ವಿಶಾಸಕ ಹಂಪಯ್ಯ ನಾಯಕ ಅವರು ಮಾತನಾಡಿ, ಮಾನ್ವಿ ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ಗೇಜ್ ಕಡಿಮೆಯಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದು, ಇದರಿಂದ ಕೆರೆ ತುಂಬಿಸಲು ಆಗುತ್ತಿಲ್ಲ ಎಂದರು.

ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿಯಲ್ಲಿ ಒಟ್ಟು 1210 ಕಾಮಗಾರಿಗಳ ಗುರಿಯಿದ್ದು, ಅದರಲ್ಲಿ 1129 ಕಾಮಗಾರಿಗಳು ಪ್ರಗತಿಯಲ್ಲಿವೆ. ಉಳಿದಂತೆ 81 ಕಾಮಗಾರಿಗಳು ಪ್ರಗತಿಯಲ್ಲಿವೆ. ಈವರೆಗೆ ಶೇ.51 ರಷ್ಟು ಆರ್ಥಿಕ ಪ್ರಗತಿ ಸಾಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ ಯೋಜನೆ ಅಧಿಕಾರಿ ಶರಣಬಸವರಾಜ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಪ್ರಕಾಶ್, ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕು ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಸಭೆಯಲ್ಲಿದ್ದರು.

# ಜೆಸ್ಕಾಂ ನಿಂದ ಏಪ್ರಿಲ್ 9ರಂದು ನಗರದ ವಿವಿಧ ಕಡೆ ವಿದ್ಯುತ್ ವ್ಯತ್ಯಯ

**ರಾಯಚೂರು :** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 1ರ ವ್ಯಾಪ್ತಿಗೆ ಬರುವ ಶಾಖೆ 2ರಲ್ಲಿ ರಸ್ತೆ ಕಾಮಗಾರಿ ನಿರ್ವಾಹಿಸುತ್ತಿರುವ ಪ್ರಯುಕ್ತ ಏಪ್ರಿಲ್-8ರ ಬೆಳಿಗ್ಗೆ 09:30 ಗಂಟೆಯಿಂದ ಸಾಯಂಕಾಲ 05:30 ಗಂಟೆವರೆಗೆ ಗೌಸಿಯಾ ಕಾಲೋನಿ, ಮಿನರಲ್ ವಟರ್ ಪ್ಲಾಂಟ್ ಅತಿರ, ಬಂದೇನವಾಜ್ ಕಾಲೋನಿ, ಎಕ್ಲಸ್ಪುರ್ ರಸ್ತೆ, ಚೌದರಿ ಲೇಔಟ್, ಗಾಂಧಿ ಲೇಔಟ್, ಹೇಮಾ ಪ್ರೈಡ್, ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಯೋಗ ಶಿಬಿರ

**ಧಾರವಾಡ, ಏ.8:** ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಕಚೇರಿಯಲ್ಲಿ ಉಚಿತ ಯೋಗ ಶಿಬಿರದ ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಶಿಬಿರವನ್ನು ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಅಡವೇಶ್ ಇಟಗಿ ಅವರು ಉದ್ಘಾಟಿಸಿ, ಮಾತನಾಡಿ, ಬೇಸಿಗೆ ಇರುವುದರಿಂದ ಮಕ್ಕಳು ಒಳಾಂಗಣ ಆಟಗಳನ್ನು ಆಡಬೇಕು. ಸರಿಯಾಗಿ ಪೌಷ್ಟಿಕ ಆಹಾರವನ್ನು ಸೇವಿಸಬೇಕು. ಜಾಸ್ತಿ ನೀರನ್ನು ಕುಡಿಯಬೇಕು. ಗಿಡ ಹತ್ತುವುದು, ಕೆರೆಗಳಿಂದ ದೂರ ಇರುವುದು, ಮೊಬೈಲ್ ಬಳಕೆ ಮಾಡದೇ ಇರುವುದು, ಮಕ್ಕಳು ಸುರಕ್ಷತೆಯನ್ನು ಕಾಪಾಡಿಕೊಳ್ಳಬೇಕು. ಯೋಗ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ ಎಂದು ತಿಳಿಸಿದರು.ಆಪ್ತ ಕಾರ್ಯದರ್ಶಿ ಅನ್ನಪೂರ್ಣ ಸಂಗಳದ ಮಾತನಾಡಿ ಯೋಗ ಶಿಬಿರದ ಕುರಿತು ಮಕ್ಕಳಿಗೆ ಮಾರ್ಗದರ್ಶನ ನೀಡಿದರು. ಶಿಬರದಲ್ಲಿ ಹುಬ್ಬಳ್ಳಿ ಧಾರವಾಡದ ಮಕ್ಕಳು ಭಾಗವಹಿಸಿದ್ದರು.

# ದೊರನಹಳ್ಳಿ ಸರಕಾರಿ ಆಸ್ಪತ್ರೆ ಕಟ್ಟಡ ಕಾಮಗಾರಿಯಲ್ಲಿ ಕಳಪೆ ಆರೋಪ: ತನಿಖೆಗೆ ಆಗ್ರಹ




**ಯಾದಗಿರಿ:ಏ.8:** ಜಿಲ್ಲೆಯ ಶಹಾಪುರ ತಾಲೂಕಿನ ದೊರನಹಳ್ಳಿ ಪಟ್ಟಣದಲ್ಲಿರುವ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಹೊಸ ಕಟ್ಟಡ ನಿರ್ಮಾಣ ಕಾಮಗಾರಿ ಕುರಿತು ಗಂಭೀರ ಕಳಪೆ ಆರೋಪಗಳು ಕೇಳಿಬಂದಿದ್ದು, ಸಾರ್ವಜನಿಕರಲ್ಲಿ ತೀವ್ರ ಆತಂಕ ಮತ್ತು ಅಸಮಾಧಾನ ಉಂಟಾಗಿದೆ.

ಸುಮಾರು 6.50 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಈ ಬಹುಮಹಡಿ ಆರೋಗ್ಯ ಕಟ್ಟಡವು 30ರಿಂದ 50 ಹಾಸಿಗೆಗಳ ಸೌಲಭ್ಯ ಹೊಂದುವಂತೆ ರೂಪಿಸಲಾಗಿದ್ದು, ಭವಿಷ್ಯದಲ್ಲಿ ಸಾವಿರಾರು ಜನರಿಗೆ ಪ್ರಾಥಮಿಕ ಹಾಗೂ ತುರ್ತು ಆರೋಗ್ಯ ಸೇವೆ ಒದಗಿಸುವ ಪ್ರಮುಖ ಕೇಂದ್ರವಾಗಬೇಕಿದೆ. ಆದರೆ ಕಾಮಗಾರಿಯ ಗುಣಮಟ್ಟದ ಬಗ್ಗೆ ಉಂಟಾಗಿರುವ ಅನುಮಾನಗಳು ಯೋಜನೆಯ ವಿಶ್ವಾಸಾರ್ಹತೆಯನ್ನೇ ಪ್ರಶ್ನಿಸುವಂತೆ ಮಾಡಿವೆ.

ಈ ಕಾಮಗಾರಿಯನ್ನು ಗುತ್ತಿಗೆದಾರ ತಾಯಪ್ಪ ಯಾದವ್ ಹಾಗೂ ಇಂಜಿನಿಯರ್ ರವಿ ಯಾದವ್ ನೇತೃತ್ವದಲ್ಲಿ ಕೈಗೊಳ್ಳಲಾಗುತ್ತಿದ್ದು, ಕಟ್ಟಡದ ಮೇಲ್ಭಾಗದ ನಿರ್ಮಾಣದಲ್ಲಿ ನಿರ್ಲಕ್ಷ್ಯ ಮತ್ತು ಕಳಪೆ ಸಾಮಗ್ರಿ ಬಳಕೆಯಾಗಿದೆ ಎಂಬ ಆರೋಪಗಳು ಸಾರ್ವಜನಿಕ ವಲಯದಲ್ಲಿ ವ್ಯಾಪಕವಾಗಿ ಕೇಳಿಬರುತ್ತಿವೆ.

ಈ ಕುರಿತು ಸಾಮಾಜಿಕ ಹೋರಾಟಗಾರ ಭೀಮು ಸಾವೂರು ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ಮಹೇಶ್ ಬಿರಾದರ್ ಅವರಿಗೆ ಮನವಿ ಸಲ್ಲಿಸಿದ್ದು, ಜೊತೆಗೆ ಯಾದಗಿರಿ ಜಿಲ್ಲೆಯ ಉನ್ನತ ಅಧಿಕಾರಿಗಳ ಗಮನಕ್ಕೂ ವಿಷಯವನ್ನು ತಂದಿದ್ದಾರೆ. ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ, ಕಾಮಗಾರಿಯ ಗುಣಮಟ್ಟವನ್ನು ಪರೀಕ್ಷಿಸಿ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಇನ್ನೊಂದೆಡೆ, ಕಾಮಗಾರಿಯ ಬಗ್ಗೆ ಧ್ವನಿ ಎತ್ತುತ್ತಿರುವವರ ಮೇಲೆ ಒತ್ತಡ ತರುವ ಪ್ರಯತ್ನಗಳೂ ನಡೆಯುತ್ತಿವೆ ಎಂಬ ಆರೋಪ ಕೇಳಿಬಂದಿದೆ. ಗುತ್ತಿಗೆದಾರ ತಾಯಪ್ಪ ಯಾದವ್ ಅವರು, ಕಾಮಗಾರಿಯ ವಿರುದ್ಧ ಪತ್ರಿಕೆಗಳಿಗೆ ಹೇಳಿಕೆ ನೀಡುತ್ತಿರುವ ಸಾಮಾಜಿಕ ಹೋರಾಟಗಾರರ ವಿವರಗಳನ್ನು ಸಂಗ್ರಹಿಸಿ, ಸ್ಥಳೀಯರ ಮೂಲಕ ಕರೆ ಮಾಡಿ ಬೆದರಿಕೆ ನೀಡಲಾಗುತ್ತಿದೆ ಎಂದು ಪತ್ರಕರ್ತರ ಮುಂದೆ ಹೇಳಿಕೆ ನೀಡಿರುವುದು ಮತ್ತಷ್ಟು ಆತಂಕಕ್ಕೆ ಕಾರಣವಾಗಿದೆ.

ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ಆರೋಗ್ಯ ಕಟ್ಟಡದ ಕಾಮಗಾರಿಯೇ ವಿವಾದಕ್ಕೆ ಗುರಿಯಾಗಿರುವುದು ಜನರಲ್ಲಿ ಅಸಮಾಧಾನ ಹೆಚ್ಚಿಸಿದ್ದು, ಈ ಕುರಿತು ಉನ್ನತ ಮಟ್ಟದ ತನಿಖೆ ನಡೆಸಿ, ಹೊಣೆಗಾರರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಪೂರ್ವಸಿದ್ಧತಾ ಸಭೆ



**ಗದಗ, ಏ8 :** ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಏಪ್ರಿಲ್ 14 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗುತ್ತಿದ್ದು ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮತ್ತು ಅಚ್ಚುಕಟ್ಟಾಗಿ ಆಚರಿಸಲು ವಿವಿಧ ಇಲಾಖೆಯ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಮ್ ಅವರ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ನೋಡಿಕೊಳ್ಳಬೇಕು. ಜಯಂತಿ ಕಾರ್ಯಕ್ರಮಕ್ಕೆ ಎಲ್ಲ ಇಲಾಖೆಯ ಅಧಿಕಾರಿಗಳು ತಪ್ಪದೇ ಕಡ್ಡಾಯವಾಗಿ ಹಾಜರಾಗಬೇಕು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಜಯಂತಿ ಕಾರ್ಯಕ್ರಮದಂದು ಸನ್ಮಾನಿಸಲಾಗುವುದು. ಜಯಂತಿ ಕಾರ್ಯಕ್ರಮಕ್ಕೂ ಮುನ್ನ ಮೆರವಣಿಗೆಯು ನಗರಸಭೆ ಆವರಣದಿಂದ ಅಂಬೇಡ್ಕರ್ ಭವನದವರೆಗೆ ಬಂದು ತಲುಪುವುದು. ಮೆರವಣಿಗೆಯಲ್ಲಿ ಎಸ್‌ಎಸ್‌ಎಲ್‌ಸಿ ಎನ್‌ಸಿಸಿ ವಿದ್ಯಾರ್ಥಿಗಳು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಂಡು ಮೆರವಣಿಗೆಗೆ ಶೋಭೆ ತರಬೇಕು. ಜಯಂತಿ ಕಾರ್ಯಕ್ರಮದ ಪ್ರಯುಕ್ತ ಏಪ್ರಿಲ್ 8 ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗುತ್ತಿದೆ. ಒಟ್ಟಾರೆಯಾಗಿ ಕಾರ್ಯಕ್ರಮ ಯಶಸ್ವಿಯಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚನೆ ನೀಡಿದರು.

ಸಭೆಯಲ್ಲಿ ಬ್ಯಾನರ್ ಅಳವಡಿಕೆ, ವಿದ್ಯುತ್ ವ್ಯವಸ್ಥೆ, ವೇದಿಕೆ ಅಲಂಕಾರ, ಉಪನ್ಯಾಸ ಕಾರ್ಯಕ್ರಮ, ಉಪಹಾರದ ವ್ಯವಸ್ಥೆ, ಕಲಾತಂಡಗಳ ಆಯ್ಕೆ, ಕುಡಿಯುವ ನೀರಿನ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎಂ.ತುಂಬರಮಟ್ಟಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಡಿಡಿಎಸ್‌ಆರ್ ರುದ್ರಣ್ಣಗೌಡ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ಶ್ರೀಮತಿ ನಂದಾ ಹಣಬರಟ್ಟಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು.

# ಅಂಬೇಡ್ಕರ್ ಜಯಂತಿ ಅರ್ಥಪೂರ್ಣ, ಅದ್ದೂರಿ ಆಚರಣೆಗೆ ನಿರ್ಧಾರ



**ತಾಳಿಕೋಟೆ:ಏ.8:** ಏಪ್ರೀಲ್ 14 ರಂದು ಆಚರಿಸಲಾಗುತ್ತಿರುವ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರ ಜಯಂತಿಯನ್ನು ತಾಲೂಕಾಡಳಿತದ ನೇತೃತ್ವದಲ್ಲಿ ಅದ್ದೂರಿಯಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು ಕಾರ್ಯಕ್ರಮದ ಯಶಸ್ವಿಗೆ ಎಲ್ಲರೂ ಸಹಕರಿಸಬೇಕೆಂದು ತಹಶಿಲ್ದಾರರಾದ ಪ್ರದೀಪ ದೇವಗಿರಿ ಅವರು ಹೇಳಿದರು.

ಮಂಗಳವಾರ ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದ ಸಭಾಂಗಣದಲ್ಲಿ ತಾಲೂಕ ಆಡಳಿತ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದ ಅವರು ನಮ್ಮ ದೇಶಕ್ಕೆ ಸಂವಿದಾನದ ಮೂಲಕ ಸಮಾನತೆಯನ್ನು ಒದಗಿಸಿದ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಜಯಂತಿಯನ್ನು ಅತ್ಯಂತ ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಗುವುದು. ಅಂದು ಬೆಳಿಗ್ಗೆ 9 ಗಂಟೆಗೆ ಡಾ.ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಅಲ್ಲಿಂದಲೇ ಬಾಬಾ ಸಾಹೇಬರ ಭಾವಚಿತ್ರದ ಭವ್ಯ ಮೆರವಣಿಗೆ ಆರಂಭಿಸಲಾಗುವುದು. ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ಶ್ರೀ ಅಂಬಾ ಭವಾನಿ ಮಂದಿರ ರಸ್ತೆ, ಕತ್ರಿ ಬಜಾರ್, ವಿಠ್ಠಲ ಮಂದಿರ ರಸ್ತೆ, ಶಿವಾಜಿ ಮಹಾರಾಜ ಸರ್ಕಲ್, ಮಹಾರಾಣಾಪ್ರತಾಪ್‌ಸಿಂಹ ಸರ್ಕಲ್, ಬಸ್ ನಿಲ್ದಾಣದ ಮುಂಭಾಗದ ರಸ್ತೆಗುಂಟಾ ಹಾಯ್ದು ಶ್ರೀ ಬಸವೇಶ್ವರ ವೃತ್ತದಿಂದ ಅಂಬೇಡ್ಕರ್ ಸರ್ಕಲ್‌ದವರೆಗೆ ತಲುಪುವುದು. ನಂತರ ಅಲ್ಲಿಯೇ ವೇದಿಕೆ ಕಾರ್ಯಕ್ರಮ ಜರುಗಲಿದೆ ಸದರಿ ಜಯಂತಿಯನ್ನು ಸರ್ಕಾರದ ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಪಟ್ಟಣದ ಪ್ರಮುಖ ವೃತ್ತಗಳನ್ನು ಅಲಂಕರಿಸಲಾಗುವುದು ಬಾಬಾ ಸಾಹೇಬರ ತತ್ವ ಆದರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಲು ಉಪನ್ಯಾಸ ಆಯೋಜಿಸಲಾಗುವುದು ಎಲ್ಲ ಕಾರ್ಯಕ್ರಮಗಳು ಶಾಂತಿಯುತವಾಗಿ ನಡೆಯುವಂತಾಗಲು ಪೊಲೀಸ್ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಬಿ.ಜಿ.ಮಠ ಸಭೆಯಲ್ಲಿ ವಿವಿಧ ಇಲಾಖೆಗಳಿಗೆ ವಹಿಸಿಕೊಟ್ಟ ಜವಾಬ್ದಾರಿಗಳನ್ನು ಲೋಪ ಆಗದಂತೆ ನೋಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಪಟ್ಟಣದ ಗಣ್ಯರಾದ ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ.ಕಟ್ಟಿಮನಿ, ಮುಖಂಡರುಗಳಾದ ಮುತ್ತಪ್ಪ ಚಮಲಾಪೂರ, ಬಸವರಾಜ ಕಟ್ಟಿಮನಿ, ಪ್ರಭುಗೌಡ ಮದರಕಲ್ಲ, ಕಾಶಿನಾಥ ಮುರಾಳ, ಜೈಭೀಮ್ ಮುತ್ತಗಿ, ಪರಶುರಾಮ ತಂಗಡಗಿ, ಪ್ರಕಾಶ ಹಜೇರಿ, ನಾಗೇಶ ಕಟ್ಟಿಮನಿ, ಪರಶುರಾಮ ಕಟ್ಟಿಮನಿ, ಮಹೇಶ ಚಲವಾದಿ, ರಾಮಣ್ಣ ಕಟ್ಟಿಮನಿ, ಸಂಜೀವಪ್ಪ ಬರದೇನಾಳ, ಸಿದ್ದು ಬಾರಿಗಿಡದ, ಗೋಪಾಲ ಕಟ್ಟಿಮನಿ, ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ, ಸ.ಕ.ಇ. ಶಿವಲಿಂಗಪ್ಪ ಹಚಡದ, ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ, ಡಾ.ಶ್ರೀಶೈಲ ಹುಕ್ಕೇರಿ, ಎಸ್.ಸಿ.ಪಾಟೀಲ, ಶಿರಸ್ತೆದಾರಜೆ.ಆರ್.ಜೈನಾಪೂರ, ಸಿಆರ್ ಸಿ ರಾಜು ವಿಜಾಪುರ ಹಾಗೂ ತಾಲೂಕ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಅಗ್ನಿವೀರರ ನೇಮಕಾತಿ ರ್‍ಯಾಲಿ: ಸಿದ್ಧತೆಗಾಗಿ ಜಿಲ್ಲಾಧಿಕಾರಿ ಡಾ. ಆನಂದ ಕೆ. ಸೂಚನೆ

**ವಿಜಯಪುರ,ಏ.8:** ಐತಿಹಾಸಿಕ ವಿಜಯಪುರದಲ್ಲಿ ಮಂಗಳೂರಿನ ಸೇನಾ ನೇಮಕಾತಿ ಕಚೇರಿ ವತಿಯಿಂದ ಅಗ್ನಿಪಥ್ ಯೋಜನೆಯಡಿ ಭಾರತೀಯ ಸೇನಾ ನೇಮಕಾತಿ ಬೃಹತ್ ರ್‍ಯಾಲಿ ನಗರದಲ್ಲಿ ಸೆಪ್ಟೆಂಬರ್ 10 ರಿಂದ 30ರವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜರುಗಿದ ಅಗ್ನಿಪಥ ನೇಮಕಾತಿ ರ್‍ಯಾಲಿಯ ಪೂರ್ವ ಸಿದ್ಧತೆ ಕುರಿತಂತೆ ಸೇನಾ ನೇಮಕಾತಿ ಅಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖಾ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ವಿಜಯಪುರ ಜಿಲ್ಲೆಯು ಒಳಗೊಂಡಂತೆ ರಾಜ್ಯದ 11 ಜಿಲ್ಲೆಗಳ ಅಭ್ಯರ್ಥಿಗಳು ಈ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ಈ ಅವಧಿಯಲ್ಲಿ ಪ್ರತಿದಿನ ಅಂದಾಜು 800 ಅಭ್ಯರ್ಥಿಗಳಿಗೆ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ಅಗ್ನಿವೀರರ ಆಯ್ಕೆ ಪ್ರಕ್ರಿಯೆಯ ರ್‍ಯಾಲಿಯ ದೈಹಿಕ ಪರೀಕ್ಷೆ ಹಾಗೂ ವೈದ್ಯಕೀಯ ಪರೀಕ್ಷೆಗಳು ಸೆಪ್ಟೆಂಬರ್ 10 ರಿಂದ 30ರವರೆಗೆ ನಡೆಯಬಹುದಾಗಿದೆ. ನಗರದ ಡಾ. ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಈ ಬೃಹತ್ ನೇಮಕಾತಿ ರ್‍ಯಾಲಿ ನಡೆಯಲಿದೆ ಎಂದರು. ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿರುವ ಅಗ್ನಿಪಥ್ ಆಯ್ಕೆ ಪ್ರಕ್ರಿಯೆಯಲ್ಲಿ ದೈಹಿಕ ಪರೀಕ್ಷೆ, ವೈದ್ಯಕೀಯ ಪರೀಕ್ಷೆ ಹಾಗೂ ದಾಖಲಾತಿ ಪರಿಶೀಲನಾ ಪ್ರಕ್ರಿಯೆ ನಡೆಯಲಿವೆ ಎಂದರು.

ಜಿಲ್ಲಾಡಳಿತದಿಂದ ಸೇನಾ ನೇಮಕಾತಿ ಅಧಿಕಾರಿಗಳು ತಿಳಿಸಿದಂತೆ, ಈ ಅವಧಿಯಲ್ಲಿ ಬೇಕಾದ ಎಲ್ಲ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು. ಪ್ರತಿ ದಿನ ಬೆಳಿಗ್ಗೆ 5 ಗಂಟೆಯಿಂದಲೇ ಆಯ್ಕೆ ಪ್ರಕ್ರಿಯೆ ಪ್ರಾರಂಭಗೊಳ್ಳುತ್ತದೆ. ಅಂದಾಜು ಹತ್ತು ಸಾವಿರದಷ್ಟು ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಸೇನಾ ನೇಮಕಾತಿ ವಿಭಾಗದಿಂದ ಅಧಿಕಾರಿಗಳು ಆಗಮಿಸಲಿದ್ದಾರೆ ಎಂದರು.

ರ್‍ಯಾಲಿ ನಡೆಯುವ ಸ್ಥಳ:
ನೇಮಕಾತಿ ರ್‍ಯಾಲಿಯನ್ನು ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆಸಲು ನಿರ್ಧರಿಸಲಾಗಿದೆ. ಒಳಾಂಗಣ ಬ್ಯಾಡ್ಮಿಂಟನ್ ಕೋರ್ಟ್ ಮತ್ತು ಶೆಡ್‌ಗಳು ಸೇರಿದಂತೆ ಸಿಂಥೆಟಿಕ್ ಟಿಕ್ ಮತ್ತಿತರೆ ಮೂಲಸೌಕರ್ಯಗಳ ಲಭ್ಯತೆಯು ನೇಮಕಾತಿ ರ್‍ಯಾಲಿಗೆ ಅನುಕೂಲ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಭ್ಯರ್ಥಿಗಳ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲು ಬ್ಯಾಡ್ಮಿಂಟನ್ ಕೋರ್ಟ್ ಬಳಸಿಕೊಳ್ಳಲು ಸೇನಾಧಿಕಾರಿಗಳು ತಿಳಿಸಿದ್ದಾರೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಲನಿರೋಧಕ ಟೆಂಟ್: ರ್‍ಯಾಲಿ ವೇಳೆ ಅಭ್ಯರ್ಥಿಗಳು ಕಾಯುವ ಅಥವಾ ಮೌಲ್ಯಮಾಪನಕ್ಕೊಳಪಡುವ ಸಾಧ್ಯತೆಯಿರುವುದರಿಂದ ರ್‍ಯಾಲಿ ಸ್ಥಳದಲ್ಲಿ ಜಲನಿರೋಧಕ ಟೆಂಟ್‌ಗಳನ್ನು ಹಾಕಲು ನಿರ್ಧರಿಸಲಾಗಿದ್ದು, ಟೆಂಟ್‌ನಲ್ಲಿ ಟೇಬಲ್ ಮತ್ತು ಕುರ್ಚಿ ವ್ಯವಸ್ಥೆ ಮಾಡಲಾಗುವುದು ಎಂದವರು ತಿಳಿಸಿದ್ದಾರೆ.

ಬ್ಯಾರಿಕೇಡ್: ರ್‍ಯಾಲಿಗೆ ಪ್ರವೇಶ ನಿಯಂತ್ರಣ, ಜನಸಂದಣಿ ನಿರ್ವಹಣೆ ಮತ್ತು ಓಟದ ಪರೀಕ್ಷೆಯನ್ನು ಸರಾಗವಾಗಿ ನಡೆಸುವ ನಿಟ್ಟಿನಲ್ಲಿ ರ್‍ಯಾಲಿ ನಡೆಯುವ ಸ್ಥಳದ ಒಳ ಮತ್ತು ಹೊರಗೆ ಬ್ಯಾರಿಕೇಡ್ ಹಾಕಲು ಕ್ರಮವಹಿಸಿ,ನೇಮಕಾತಿ ಅಧಿಕಾರಿಗಳು ಹಾಗೂ ಭಾಗವಹಿಸುವ ಅಭ್ಯರ್ಥಿಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲಾಗುವುದು.

ವೈದ್ಯಕೀಯ ಸೌಲಭ್ಯ:
ಪರೀಕ್ಷೆಗೆ ಒಳಪಡುವ ಅಭ್ಯರ್ಥಿಗಳ ಹಿತದೃಷ್ಟಿಯಿಂದ ವೈದ್ಯರು, ನರ್ಸಿಂಗ್ ಸಹಾಯಕರು ಮತ್ತು ಆಂಬ್ಯುಲೆನ್ಸ್ ಸೌಲಭ್ಯ ಕಲ್ಪಿಸಲು ಸೂಚಿಸಿದರು.

ವಿದ್ಯುತ್ ಬೆಳಕು:
ಕ್ರೀಡಾಂಗಣದಲ್ಲಿ ನೇಮಕಾತಿ ಸುಸೂತ್ರವಾಗಿ ನಡೆಯಬೇಕೆಂಬ ದೂರದೃಷ್ಟಿಯಿಂದ ನಿರಂತರ ವಿದ್ಯುತ್ ಸೌಲಭ್ಯ ಒದಗಿಸಲು,

ಇಂಟರ್ನೆಟ್ ಸಂಪರ್ಕ:
ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯ ಅಗತ್ಯವಿರುವ ವಿವಿಧ ವ್ಯವಸ್ಥೆಗಳಿಗೆ ಆಪ್ಟಿಕಲ್ ಫೈಬರ್ ಸಂಪರ್ಕ ಮತ್ತು ಇಂಟರ್ನೆಟ್ ಸಂಪರ್ಕವನ್ನು ಸ್ಥಾಪಿಸಲು ಬಿಎಸ್ ಎನ್ ಎಲ್ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸಿಸಿಟಿವಿ ಕ್ಯಾಮೆರಾ:
ಸ್ಥಳದಲ್ಲಿ ಭದ್ರತೆ, ರಕ್ಷಣೆ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಿಕೊಳ್ಳಲು ಸಿಸಿಟಿವಿ ಕ್ಯಾಮೆರಾ ಅಳವಡಿಸುವಂತೆ ಎಲ್ಲರಿಗೂ ಅಗತ್ಯವಾದ ಮೂಲ ಸೌಕರ್ಯಗಳನ್ನು ಕಲ್ಪಿಸಬೇಕು. ಸಾರಿಗೆ ವ್ಯವಸ್ಥೆ, ವಸತಿ ವ್ಯವಸ್ಥೆ, ಸ್ವಚ್ಛತಾ ವ್ಯವಸ್ಥೆ, ತಾತ್ಕಾಲಿಕ ವಸತಿ ವ್ಯವಸ್ಥೆ, ಸೇನಾ ನೇಮಕಾತಿಗೆ ಅನುಗುಣವಾಗಿ ಜಿಲ್ಲಾ ಕ್ರೀಡಾಂಗಣ ಸಿದ್ಧಗೊಳಿಸುವ ಕಾರ್ಯವನ್ನು ಸ್ಥಳೀಯ ಅಧಿಕಾರಿಗಳು ಕೈಗೊಳ್ಳಬೇಕಾಗಿರುವುದರಿಂದ ನೇಮಕಾತಿ ಪ್ರಾಧಿಕಾರದ ಅಧಿಕಾರಿಗಳ ಅವಶ್ಯಕತೆ ಹಾಗೂ ಮಾರ್ಗದರ್ಶನದಂತೆ ವ್ಯವಸ್ಥೆ ಮಾಡಬೇಕು. ಯಾವುದೇ ಲೋಪವಾಗಬಾರದು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸೆಪ್ಟೆಂಬರ್ ನಲ್ಲಿ ಕ್ರೀಡಾಂಗಣದಲ್ಲಿ ನಡೆಯಬಹುದಾದ ಕ್ರೀಡಾಕೂಟಗಳನ್ನು ಮರು ನಿಗದಿಗೊಳಿಸಬೇಕು ಎಂದು ಜಿಲ್ಲಾ ಯುವಜನ ಸೇವೆ ಮತ್ತು ಕ್ರೀಡಾಧಿಕಾರಿಗೆ ಜಿಲ್ಲಾಧಿಕಾರಿ ಸೂಚಿಸಿದರು. ಅಂದಾಜು15 ದಿನಗಳ ಕಾಲ ನಡೆಯುವ ನೇಮಕಾತಿ ರ್‍ಯಾಲಿಯಲ್ಲಿ ವಿವಿಧ ಜಿಲ್ಲೆಯ ಅಭ್ಯರ್ಥಿಗಳು ಭಾಗವಹಿಸಲು ಯಾವುದೇ ಅನಾನುಕೂಲವಾಗದ ನಿಟ್ಟಿನಲ್ಲಿ ಅಗತ್ಯ ವ್ಯವಸ್ಥೆ ಕೈಗೊಳ್ಳಲು ಸೂಚಿಸಲಾಯಿತು.



ವೈದ್ಯಕೀಯ ತಂಡವನ್ನು ಪಾಳಿಯಂತೆ ನೇಮಿಸಬೇಕು. ದಾಖಲೆಗಳ ಪರಿಶೀಲನೆಗೆ ಕಂದಾಯ, ಶಿಕ್ಷಣ ಹಾಗೂ ಕ್ರೀಡಾ ಇಲಾಖೆಯ ಅಧಿಕಾರಿಗಳನ್ನು ಆಯ್ಕೆ ಪ್ರಕ್ರಿಯೆ ನಡೆಯುವ ಅವಧಿಗೆ ನಿಯೋಜಿಸಬೇಕು. ವಸತಿ ವ್ಯವಸ್ಥೆ ಕಲ್ಪಿಸಲಾಗುವ ಸ್ಥಳ ಹಾಗೂ ಕ್ರೀಡಾಂಗಣದ ಹೊರಾಂಗಣದಲ್ಲಿ ಸ್ವಚ್ಛತೆ ಕೈಗೊಳ್ಳಲು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಅಗ್ನಿಪಥ್ ನೇಮಕಾತಿ ವಿಭಾಗದ ಅಧಿಕಾರಿ ಕರ್ನಲ್ ಸೋಮು ಮಹಾರಾಜನ್ ಅವರು ಮಾತನಾಡಿ, ಹತ್ತು ಸಾವಿರ ಅಭ್ಯರ್ಥಿಗಳು ಅಗ್ನಿವೀರರ ನೇಮಕಾತಿಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ. ದಿನಕ್ಕೆ 800 ಅಭ್ಯರ್ಥಿಗಳ ದೈಹಿಕ ಪರೀಕ್ಷೆ, ವೈದ್ಯಕೀಯ ಪರೀಕ್ಷೆ ನಡೆಸಲಾಗುವುದು. ದಾಖಲೆಗಳ ಪರಿಶೀಲನೆ ಸಹ ನಡೆಸಲಾಗುವುದು ಅಗತ್ಯ ಸೌಲಭ್ಯಗಳ ಕುರಿತಂತೆ ಮಾಹಿತಿ ನೀಡಿದರು.

ಪೊಲಿಸ್ ಬಂದೋಬಸ್ತ್:
ಪ್ರವೇಶ ನಿಯಂತ್ರಣ, ಜನಸಂದಣಿ ನಿರ್ವಹಣೆ ಮತ್ತು ರ್‍ಯಾಲಿ ಸುಗಮವಾಗಿ ನಡೆಸಲು ನೇಮಕಾತಿ ಸ್ಥಳದ ಒಳ ಮತ್ತು ಹೊರಗೆ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ತಿಳಿಸಿದರು.

ಸಭೆಯಲ್ಲಿ ಕರ್ನಲ್ ಬಿಕೆಕೆ ವಂಶಿ,ಆಹಾರ ಇಲಾಖೆಯ ಹಾಗೂ ಸೈನಿಕ ಕಲ್ಯಾಣ ಹಾಗೂ ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ, ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ವೀರಯ್ಯ ಸಾಲಿಮಠ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕುಸ್ತಿ ಪಂದ್ಯಾವಳಿ



**ಲಕ್ಷ್ಮೇಶ್ವರ,ಏ8:** ಪಟ್ಟಣದ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಜಾತ್ರಾಮಹೋತ್ಸವ ಅಂಗವಾಗಿ ಕಳೆದ 3 ದಿನಗಳಿಂದ ದೇವಸ್ಥಾನದ ಬಯಲಿನಲ್ಲಿ ಮುಕ್ತ ಕುಸ್ತಿ ಪಂದ್ಯಾವಳಿಗಳು ನಡೆದವು.

ಸೋಮವಾರ ಪೈನಲ್ ಗೋಧೋಳಿ ಸಮಯದಲ್ಲಿ ನಡೆದ ವಾರಗಿ ಪೈಕಿ-ಪರಸಿ ಪೈಕಿ ಕುಸ್ತಿ ಅಂತಿಮ ಪಂದ್ಯಾವಳಿಯಲ್ಲಿ ಲಕ್ಕುಂಡಿಯ ಪೈಲ್ವಾನ್ ಮುತ್ತು ಭಾವಿ ಗೆಲುವಿನ ಖಡಗದೊಂದಿಗೆ ವಿಜಯ ಮಾಲೆ ಧರಿಸಿದರು.

ಮೊದಲು ವಾರಿಗಿ ಪೈಕಿ ಕುಸ್ತಿಯಲ್ಲಿ ಲಕ್ಕುಂಡಿಯ ಮುತ್ತು ಬಾವಿ ಪೈಲ್ವಾನ್ ಹಾಗೂ ಯಳವಟ್ಟಿಯ ಶಿದ್ದಲಿಂಗೇಶ ಈ ಇಬ್ಬರ ನಡುವೆ ನಡೆದ ಕಾದಾಟದಲ್ಲಿ ಲಕ್ಕುಂಡಿಯ ಮುತ್ತು ಬಾವಿ ಪೈಲ್ವಾನ್ ಜಯಶಾಲಿಯಾಗಿ ಬೆಳ್ಳಿ ಕಡಗ ಮತ್ತು ನಗದು ತಮ್ಮದಾಗಿಸಿಕೊಂಡರು. ನಂತರ ಪರಸಿ ಪೈಕಿ ಕುಸ್ತಿಯಲ್ಲಿ ಮುತ್ತು ಬಾವಿ ಹಾಗೂ ಬೊಮ್ಮನಹಳ್ಳಿಯ ನಿಂಗಪ್ಪ ಇಬ್ಬರು ಮದಗಜಗಳ ನಡುವೆ 40 ನಿಮಿಷಗಳ ಕಾಲ ನಡೆದ ರೋಚಕ ಕಾಳದಲ್ಲಿ ಮತ್ತೆ ಮುತ್ತು ಪೈಲ್ವಾನ್ ಕೈ ಮೇಲಾಯಿತು.

ಸೆಣಸಿದ ಕಲಿಗಳ ವಿವಿಧ ಭಂಗಿ, ಪಟ್ಟು, ಕರಾಮತ್ತುಗಳು ನೋಡುಗರ ಮೈನವಿರೇಳಿಸುವಂತೆ ಮಾಡಿದವು. ಸ್ಥಳೀಯ ಪೈಲ್ವಾನರು ಸೇರಿದಂತೆ ಲಕ್ಕುಂಡಿ ಹಾವೇರಿ ಬೊಮ್ಮನಹಳ್ಳಿ ಧಾರವಾಡ, ಹೂವಿಲಗೋಳ ಹನುಮನಾಳ ಶಿರಹಟ್ಟಿ ಬಾಳೆಹೊಸೂರ ರಾಣಿಬೆನ್ನೂರ ಬ್ಯಾಡಗಿ, ಬಡಮಲ್ಲಿ, ಕಲಘಟಗಿ ಸೇರಿ ಅನೇಕ ಕಡೆಗಳಿಂದ 40 ಕ್ಕೂ ಹೆಚ್ಚು ಜೋಡಿಗಳು ಕುಸ್ತಿಯಲ್ಲಿ ಸೆಣಸಾಡಿಸಿದರು.

ಸಂಜೆ ಬಹುಮಾನ ಸ್ವೀಕರಿಸಿ ಮಾತನಾಡಿದ ಲಕ್ಕುಂಡಿಯ ಮುತ್ತು ಬಾವಿ ಪೈಲ್ವಾನ್ ಅವರು ಕುಸ್ತಿ ನಮ್ಮ ಹಿರಿಯರಿಂದ ಬಳುವಳಿಯಾಗಿ ಬಂದ ಜಾನಪದ ಶೈಲಿಯ ಗ್ರಾಮೀಣ ಕ್ರೀಡೆಯಾಗಿದೆ. ನಮ್ಮ ಸಂಸ್ಕತಿ, ಪರಂಪರೆಯ ಪ್ರತೀಕವಾದ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ-ಬೆಳೆಸಿಕೊಂಡು ಹೋಗುವುದು ಎಲ್ಲರ ಜವಾಬ್ದಾರಿಯಾಗಿದೆ. ಜಾತ್ರಾ ಮಹೋತ್ಸವ ಅಂಗವಾಗಿ ಸಂಪ್ರದಾಯದಂತೆ ನಡೆಸಿಕೊಂಡು ಬರಲಾಗುತ್ತಿರುವ ಈ ಕುಸ್ತಿ ಪಂದ್ಯಾವಳಿಯನ್ನು ದೇವಸ್ಥಾನ ಸೇವಾ ಕಮೀಟಿ, ಭಕ್ತಮಂಡಳಿ, ಪಟ್ಟಣದ ಹಿರಿಯರು ಮುಂದುವರೆಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ ಮತ್ತು ನಮ್ಮಂತಹ ಗ್ರಾಮೀಣ ಕುಸ್ತಿ ಪಟುಗಳಿಗೆ ವೇದಿಕೆ ಕಲ್ಪಿಸಿದಂತಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಶ್ರೀ ಕೋಡಿಯಲ್ಲಮ್ಮ ದೇವಿ ದೇವಸ್ಥಾನದ ಕಮೀಟಿಯವರು, ಪಟ್ಟಣದ ಹಿರಿಯರು, ಪೈಲ್ವಾನರು, ಕುಸ್ತಿ ಪ್ರೇಮಿಗಳು ಇದ್ದರು.

# ಡಿಜಿಟಲ್ ಪಾವತಿಯಿಂದ ಪಾರದರ್ಶಕತೆ:ನೆಲ್ಲಗಿ



**ತಾಳಿಕೋಟೆ:ಏ.8:** ವೀರಶೈವ ವಿದ್ಯಾವರ್ದಕ ಸಂಘದ ಶ್ರೀ ಖಾಸ್ಗತೇಶ್ವರ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಆಶ್ರಯ ಕಾಲೋನಿಯಲ್ಲಿ ಆಯೋಜಿಸಲಾದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ವಿಶೇಷ ಶಿಬಿರವು 2ನೇ ದಿನ ಮಂಗಳವಾರ ಸಂಭ್ರಮದಿಂದ ಆರಂಭಗೊಂಡಿತು.
ಶಿಬಿರದ ಅಂಗವಾಗಿ ಮುಂಜಾನೆ ಎನ್.ಎಸ್.ಎಸ್ ಗೀತೆಯ ಗಾಯನ ಹಾಗೂ ಯೋಗಾಭ್ಯಾಸ ನಡೆಸಲಾಯಿತು. ಬಳಿಕ ವಿದ್ಯಾರ್ಥಿಗಳು ಆಶ್ರಯ ಕಾಲೋನಿಯ ಹನುಮಾನ್ ದೇವಾಲಯ ಮತ್ತು ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಯ ಆವರಣವನ್ನು ಸ್ವಚ್ಛಗೊಳಿಸುವ ಮೂಲಕ ಶ್ರಮದಾನದಲ್ಲಿ ತೊಡಗಿಸಿಕೊಂಡರು.
ಶಿಬಿರದ ಮೊದಲ ದಿನ ಹಣರಹಿತ ಅರ್ಥವ್ಯವಸ್ಥೆ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಮುಖ್ಯ ಉಪನ್ಯಾಸಕರಾಗಿ ಆಗಮಿಸಿದ ಎಸ್.ಎಸ್. ನೆಲ್ಲಗಿ ಅವರು ಮಾತನಾಡಿ, ಹಣರಹಿತ ವ್ಯವಹಾರಗಳಿಂದ ಆರ್ಥಿಕ ಸ್ಥಿರತೆ ಸಾಧಿಸಬಹುದು ಹಾಗೂ ಡಿಜಿಟಲ್ ಪಾವತಿಗಳಿಂದ ಪಾರದರ್ಶಕತೆ ಹೆಚ್ಚುತ್ತದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಹಣದ ಮೌಲ್ಯ ಅರಿತು ವಂಚನೆಗಳಿಂದ ದೂರವಿದ್ದು, ಸಮಾಜದಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.
ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಎಮ್.ಆರ್. ಕತ್ತಿ ಅವರು ಮಾತನಾಡಿ, ಹಣರಹಿತ ವ್ಯವಸ್ಥೆಯಿಂದ ಭಾರತವು ಜಾಗತಿಕ ಆರ್ಥಿಕತೆಯಲ್ಲಿ ಮುಂಚೂಣಿಗೆ ಬರಲಿದೆ. ಎನ್.ಎಸ್.ಎಸ್ ಶಿಬಿರಗಳು ವಿದ್ಯಾರ್ಥಿಗಳ ಸಾಮಾಜಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಸಹಕಾರಿಯಾಗಿವೆ ಎಂದರು.
ಉಪನ್ಯಾಸಕರಾದ ಯು.ಎನ್. ಮಂಗೊಂಡ ಅವರು, ಡಿಜಿಟಲ್ ವ್ಯವಹಾರಗಳಿಂದ ನಿತ್ಯ ಜೀವನದಲ್ಲಿ ಭದ್ರತೆ ಮತ್ತು ಗೌಪ್ಯತೆ ಕಾಪಾಡಿಕೊಳ್ಳಬಹುದು ಡಿಜಿಟಲ್ ವ್ಯವಹಾರದಿಂದ ಮೋಸ ವಂಚನೆ ಹೋಗದಿರುವ ಕುರಿತು ತಿಳಿ ಹೇಳಿದರು.
ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ಡಾ. ಆರ್.ಎಂ. ಬಂಟನೂರ ಅವರು ಮಾತನಾಡಿ, ಬಸ್ ಪ್ರಯಾಣದಿಂದ ಹಿಡಿದು ದೊಡ್ಡ ಉದ್ಯಮಗಳವರೆಗೆ ಹಣರಹಿತ ವ್ಯವಹಾರ ವ್ಯಾಪಕವಾಗಿದ್ದು ಇದರ ಸುರಕ್ಷತೆ ಕುರಿತು ವಿದ್ಯಾರ್ಥಿಗಳು ಅಗತ್ಯ ಜ್ಞಾನ ಹೊಂದಬೇಕು ಎಂದು ಹೇಳಿದರು. ಪ್ರಶಿಕ್ಷಣಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳು ಹಮ್ಮಿಕೊಳ್ಳಲಾಯಿತು.
ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ ಅಧಿಕಾರಿಗಳಾದ ಎ.ಎ. ಗಂಗನಗೌಡ ಕಾರ್ಯದರ್ಶಿ ಗಳಾದ ರೇಷ್ಮಾ ಚಲವಾದಿ ಹಾಗೂ ಎನ್ ಎಸ್ ಎಸ್ ಶಿಬಿರಾರ್ಥಿಗಳು, ಮಹಾವಿದ್ಯಾಲಯದ ಸರ್ವಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.
ಕಾರ್ಯಕ್ರಮದಲ್ಲಿ ಜ್ಯೋತಿ ಮತ್ತು ತಂಡದವರು ಪ್ರಾರ್ಥಿಸಿದಿರು. ಪಾರ್ವತಿ ಮತ್ತು ತಂಡದವರು ಎನ್.ಎಸ್.ಎಸ್ ಗೀತೆಯನ್ನು ಹಾಡಿದರು. ಉಮಾಶ್ರೀ ಸ್ವಾಗತಿಸಿ ಪರಿಚಯಿಸಿದರು. ಸಂತೋಷ ಬಿರಾದಾರ್ ಪುಷ್ಪಾರ್ಪಣೆ ನೆರವೇರಿಸಿದರು. ಅನೀಶಾ ವಂದಿಸಿದರು. ಮಹಾಲಿಂಗ ಕಾರ್ಯಕ್ರಮ ನಿರೂಪಿಸಿದರು.

# ಸಾಹಿತ್ಯ ಮನುಷ್ಯನಿಗೆ ಸಂಸ್ಕಾರ ನೀಡುತ್ತದೆ:ಅಕ್ಕೋಣಿ



**ಕಲಬುರಗಿ,ಏ.8**-ಸಾಹಿತ್ಯವು ಮನುಷ್ಯನಿಗೆ ಸಂಸ್ಕಾರ ನೀಡುತ್ತದೆ. ಆ ಸಂಸ್ಕಾರವೇ ಸಂಸ್ಕೃತಿಯ ಬದುಕಿಗೆ ದಾರಿ ಮಾಡಿಕೊಡುತ್ತದೆ ಎಂದು ಕನ್ನಡ ನಾಡು ಲೇಖಕರ ಓದುಗ ರ ಸಹಕಾರಿ ಸಂಘದ ಅಧ್ಯಕ್ಷ ಅಪ್ಪಾರಾವ ಅಕ್ಕೋಣಿ ಅಭಿಪ್ರಾಯಪಟ್ಟರು.

ನಗರದ ಭಾಗ್ಯನಗರ ಬಡಾವಣೆಯ ಗುರು ಕೃಪಾ ನಿಲಯದಲ್ಲಿ ಹಿರಿಯ ಸಾಹಿತಿ ಡಾ.ವಿಜಯಕುಮಾರ ಪರುತೆ ಅವರ ಬದುಕು-ಬರಹ ಕುರಿತು ಸಿರಿಗನ್ನಡ ವೇದಿಕೆ ಮತ್ತು ಸಾಕ್ಷಿ ಪ್ರತಿಷ್ಠಾನ ಸಹಯೋಗದಲ್ಲಿ ಆಯೋ ಜಿಸಿದ್ದ ಸಾಹಿತ್ಯ ಸಮಾಗಮ ಉಪನ್ಯಾಸ ಮಾಲಿಕೆ-9 ಉದ್ಘಾಟಿಸಿ ಮಾತನಾಡಿದ ಅವರು, ಸಾಹಿತ್ಯವನ್ನು ಉಳಿಸಿ ಬೆಳೆಸಲು ನಿರಂತರ ಚಟುವಟಿಕೆಗಳು ನಡೆಯಬೇಕು, ಸಾಹಿತಿಗಳನ್ನು ಪ್ರೋತ್ಸಾಹಿಸಿ, ಅವರ ಕೃತಿಗಳನ್ನು ಖರೀದಿಸಿ ಓದಿದಾಗ ಮಾತ್ರ ಸಾಹಿತ್ಯ ಬೆಳವಣಿಗೆಗೆ ಸಾಧ್ಯವಾಗುತ್ತದೆ ಎಂದು ಹೇಳಿದರು.
ಒಲವನರಸಿ ಗಜಲ್ ಸಂಕಲನ ಕುರಿತು ಉಪನ್ಯಾಸ ನೀಡಿದ ಸಾಹಿತಿ ಡಾ.ಸಾರಿಕಾದೇವಿ ಕಾಳಗಿ ಅವರು ಪರುತೆ ಅವರು ಹಿಂದಿಯ ಪ್ರಾಧ್ಯಾಪಕರಾಗಿ ಶೈಕ್ಷಣಿಕ ಸೇವೆ ಸಲ್ಲಿಸಿ ಸಾಹಿತ್ಯದ ವಿವಿಧ ಮೂವತ್ತು ಪ್ರಕಾರದಲ್ಲಿ ಕೃಷಿ ಮಾಡಿದ್ದಾರೆ. ಒಲವನರಸಿ ಗಜಲ್ ದಲ್ಲಿ 69 ಗಜಲ್ಗಳಿವೆ. ಮಾನವ ಜೀವನದಲ್ಲಿ ಪ್ರೀತಿ ಬಹು ಮುಖ್ಯ. ಅವರಲ್ಲಿ ತಾಯ್ತಿತನ,ಪ್ರೀತಿ, ವಿಶ್ವಾಸದ,ಸಾಮಾಜಿಕ ಕಳಕಳಿ ಇಲ್ಲಿ ಎದ್ದು ಕಾಣುತ್ತವೆ.ಕುಟುಂಬಕ್ಕಾಗಿ ದುಡಿಯುವ ಮಹಿಳೆಯ ಚಿತ್ರಣ ತುಂಬಾ ಅರ್ಥಪೂರ್ಣವಾಗಿ ಚಿತ್ರಿಸಿದ್ದಾರೆ ಎಂದರು.

ಬಯಲಲಿ ಬಾನಾಡಿ ಹಾಯಿಕು ಸಂಕಲನ ಕುರಿತು ಉಪನ್ಯಾಸ ನೀಡಿದ ಶರಣಬಸವ ವಿಶ್ವವಿದ್ಯಾಲಯದ ಡಾ.ಶ್ರೀಶೈಲ ಮದಾನೆ ಹಾಯಿಕು ಕಾವ್ಯ ಜಪಾನ ದೇಶದಿಂದ ಹುಟ್ಟಿಕೊಂಡು ಬಂದ ಚಿಕ್ಕ ಕಾವ್ಯ ಪ್ರಕಾರ.17 ಸಿಲೆಬಲ್ ಕಾವ್ಯ. ಪರುತೆಯವರು ಹಾಯಿಕುಗಳಲ್ಲಿ ಪ್ರಕೃತಿ, ಜೀವನಾನುಭವಗಳು, ಪ್ರೀತಿ-ನೋವು ನಲಿವುಗಳು ಆಳವಾದ ಭಾವನೆಗಳು ಇಲ್ಲಿ ತೆರೆದು ತೋರಿಸಿದ ಅನನ್ಯ ಹಾಯಿಕುಗಳು ಎಂದರು.
ನಿವೃತ್ತ ಬ್ಯಾಂಕ್ ಮ್ಯಾನೇಜರ್ ರೇಣುಕಾಚಾರ್ಯ ಚಿಕ್ಕಮಠ ಮಾತನಾಡಿ, ಸರಳ ಸಜ್ಜನಿಕೆಗೆ ಹೆಸರಾದವರು ಪರುತೆಯವರೆಂದರು. ಅಧ್ಯಕ್ಷತೆ ವಹಿಸಿದ ಡಾ.ಗವಿಸಿದ್ಧಪ್ಪ ಪಾಟೀಲರು ಪರುತೆ ಅವರೊಬ್ಬ ಸರಳ ಜೀವನ ಜೊತೆಗೆ ಸರಳ ಬರಹ. ನಡೆ, ನುಡಿಯೊಂದಿಗೆ ಬರಹವು ತಾಜಾತನದಿಂದ ಕೂಡಿವೆ. ಅವರೊಬ್ಬ ಜೀವನೋತ್ಸಾಹದ ಚಿಲುಮೆಯ ಲೇಖಕರೆಂದರು.
ಸಾಹಿತಿ ಡಾ.ವಿಜಯಕುಮಾರ ಪರುತೆಯವರು ಮಾತನಾಡಿ, ನಾನೊಬ್ಬ ಭಾವನಾ ಜೀವಿ. ನನ್ನ ಅಧ್ಯಯನ, ವ್ಯಾಪ್ತಿಯಲ್ಲಿ ನನಗೆ ದಕ್ಕಿದಷ್ಟು ಬರೆದಿದ್ದೇನೆ. ಹಲವರ ಪ್ರೀತಿ ವಿಶ್ವಾಸದಿಂದ ಬೆಳವಣಿಗೆಯಾಗಿರುವೆ ಎಂದರು.
ಡಾ.ಶೋಭಾದೇವಿ ಚೆಕ್ಕಿ ಪ್ರಾರ್ಥನೆ ಹಾಡಿದರು.ಡಾ.ಶೀಲಾ ದೇವಿ ಬಿರಾದಾರ ನಿರೂಪಿಸಿದರು ಡಾ.ಪೀರಪ್ಪ ಸಜ್ಜನ ಸ್ವಾಗತಿಸಿದರು ಸಿದ್ಧರಾಮ ಸರಸಂಬಿ ವಂದಿಸಿದರು.
ಕನ್ನಡ ಪುಸ್ತಕ ಪ್ರಾಧಿಕಾರ ಸದಸ್ಯ ಬಿ.ಎಚ್.ನಿರಗುಡಿ, ಶರಣಗೌಡ ಪಾಟೀಲ ಪಾಳಾ,ಸಾಹಿತಿ ವಿಶ್ವನಾಥ ಭ'ಕರೆ, ಹೇಮನೂರು,ರಾಜೇಂದ್ರ ಝಳಕಿ,ರೇವಣಸಿದ್ಧಪ್ಪ ದುಕಾನ,ಶಿವಾನಂದ ಮಠಪತಿ,ಸಿ.ಎಸ್. ಮಾಲಿಪಾಟೀಲ, ಡಾ.ಶಿವಶರಣಪ್ಪ ಮೊತಕಪಲ್ಲಿ,ಡಾ.ಶ್ರೀಶೈಲ ನಾಗರಾಳ,ಡಾ.ನಾರಾಯಣ ರೋಳೇಕರ, ಡಾ.ರಾಜಕುಮಾರ ಮಾಳಗೆ,ಆಕಾಶ ತೆಗನೂರು, ಶಾಮರಾವ್ ಮಾಡ್ಯಾಳ,ಮಂಜುಳಾ ಬಳಗಾನೂರು ಗಂಗಾ ಶರಣಮ್ಮ,ಮೊದಲಾದವರು ಉಪಸ್ಥಿತರಿದ್ದರು.

# ಕೇರಳಂ, ಅಸ್ಸಾಂ, ಪುದುಚೇರಿ ವಿಧಾನಸಭೆಗೆ ನಾಳೆ ಮತದಾನ

**ನವದೆಹಲಿ, ಏ. 8-** ದೇಶಾದ್ಯಂತ ಕುತೂಹಲ ಮೂಡಿಸಿರುವ ಪಂಚರಾಜ್ಯ ವಿಧಾನಸಭಾ ಕ್ಷೇತ್ರಗಳ ಚುನಾವಣೆಗಳ ಪೈಕಿ ನಾಳೆ ಕೇರಳಂ, ಅಸ್ಸಾಂ, ಪುದುಚೆರಿ ವಿಧಾನಸಭಾ ರಾಜ್ಯಗಳ ವಿಧಾನಸಭಾ ಚುನಾವಣೆಗೆ ಮತದಾನ ಒಂದೇ ಹಂತದಲ್ಲಿ ನಡೆಯಲಿದೆ.

ಈ ಮೂರು ರಾಜ್ಯಗಳ ಚುನಾವಣಾ ಬಹಿರಂಗ ಪ್ರಚಾರಕ್ಕೆ ನಿನ್ನೆ ಸಂಜೆ ತೆರೆ ಬಿದ್ದಿದ್ದು, ನಾಳೆ ಮತದಾನ ನಡೆಯಲಿದೆ.
ಈ ಮೂರು ರಾಜ್ಯಗಳಲ್ಲಿ ಸುಗಮ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಚುನಾವಣಾ ಆಯೋಗ ಎಲ್ಲಾ ಸಿದ್ದತೆಗಳನ್ನು ಮಾಡಿಕೊಂಡಿದ್ದು, ಚುನಾವಣೆಯಲ್ಲಿ ಯಾವುದೇ ಅಕ್ರಮಗಳು, ಅಹಿತಕರ ಘಟನೆಗಳು ನಡೆಯದಂತೆ ಕಟ್ಟೆಚ್ಚರ ವಹಿಸಿ ಬಿಗಿ ಭದ್ರತೆಯನ್ನು ನಿಯೋಜಿಸಲಾಗಿದೆ.

ಕೇರಳಂನ ವಿಧಾನಸಭೆಯ ಒಟ್ಟು 140 ಕ್ಷೇತ್ರಗಳಿಗೆ ನಾಳೆ ಮತದಾನ ನಡೆಯಲಿದ್ದು, ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದ ಆಡಳಿತ ರೂಢ ಲೆಫ್ಟ್ ಡೆಮಾಕ್ರೆಟಿಕ್ ಫ್ರಂಟ್ (ಎಲ್‌ಡಿಎಫ್) ಹ್ಯಾಟ್ರಿಕ್ ವಿಜಯ ಸಾಧಿಸಿ ಮತ್ತೆ ಅಧಿಕಾರ ಹಿಡಿಯಲು ಶತ ಪ್ರಯತ್ನ ನಡೆಸಿದ್ದು, ಎಲ್‌ಡಿಎಫ್‌ಗೆ ಸೆಡ್ಡು ಹೊಡೆದಿರುವ ಕಾಂಗ್ರೆಸ್ ನೇತೃತ್ವದಲ್ಲಿ ಯುನೈಟೆಡ್ ಡೆಮಾಕ್ರೆಟಿಕ್ ಫ್ರಂಟ್ (ಯುಡಿಎಫ್) ಮತ್ತು ಬಿಜೆಪಿ ನೇತೃತ್ವದ ಎನ್‌ಡಿಎಗಳು ಗೆಲುವಿಗಾಗಿ ಪೈಪೋಟಿ ನಡೆಸಿದ್ದು, ಕೇರಳದಲ್ಲಿ ತ್ರಿಕೋನ ಸ್ಪರ್ಧೆ ಇದೆ.

ಕೇರಳದಲ್ಲಿ ಒಟ್ಟು 2.71 ಕೋಟಿ ಮತದಾರರಿದ್ದು, 25 ಸಾವಿರಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.
ಅಸ್ಸಾಂನಲ್ಲೂ ಚುನಾವಣೆ ಗೆದ್ದು ಅಧಿಕಾರ ಉಳಿಸಿಕೊಳ್ಳಲು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮ ನೇತೃತ್ವದ ಬಿಜೆಪಿ ಹರಸಾಹಸ ನಡೆಸಿದ್ದು, ಇಲ್ಲಿ ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟ ಬಿಜೆಪಿಯನ್ನು ಮಣಿಸಿ ಮತ್ತೆ ಅಧಿಕಾರ ಹಿಡಿಯುವ ತವಕದಲ್ಲಿದೆ.



ಅಸ್ಸಾಂನಲ್ಲಿ ಒಟ್ಟು 126 ವಿಧಾನಸಭಾ ಕ್ಷೇತ್ರಗಳಿದ್ದು, ಕಳೆದ ಚುನಾವಣೆಯಲ್ಲಿ ಬಿಜೆಪಿ 75ಕ್ಕೂ ಹೆಚ್ಚು ಸ್ಥಾನಗಳನ್ನು ಗೆದ್ದಿದ್ದು, ಮತ್ತೆ ಅಧಿಕಾರ ಹಿಡಿಯಲು ಎಲ್ಲಾ ರೀತಿಯ ತಂತ್ರಗಳನ್ನು ಹೆಣೆದಿದೆ.

ಅಸ್ಸಾಂನಲ್ಲಿ ಸುಮಾರು 2.4 ಕೋಟಿ ಮತದಾರರಿದ್ದಾರೆ. ಇಲ್ಲಿ ಸುಗಮ ಹಾಗೂ ನ್ಯಾಯ ಸಮ್ಮತ ಮತದಾನಕ್ಕೆ ಆಯೋಗ ಅಗತ್ಯ ಕ್ರಮ ಕೈಗೊಂಡಿದೆ.
ಪುದುಚೆರಿಯ 30 ವಿಧಾನಸಭಾ ಕ್ಷೇತ್ರಗಳಿಗೆ ನಾಳೆ ಮತದಾನ ನಡೆಯಲಿದ್ದು, ಆಡಳಿತರೂಢ ಕಾಂಗ್ರೆಸ್ ಆರ್. ನೇತೃತ್ವದಲ್ಲಿ ಬಿಜೆಪಿ ಎನ್‌ಡಿಎ ಮೈತ್ರಿಕೂಟಕ್ಕೆ ಕಾಂಗ್ರೆಸ್ ಡಿಎಂಕೆ ಮೈತ್ರಿಕೂಟ ಪ್ರಬಲ ಸವಾಲುವೊಡ್ಡಿದೆ.

ಪುದುಚೆರಿಯಲ್ಲಿ ಒಟ್ಟು 9.44 ಲಕ್ಷ ಮತದಾರರು ಮತ ಚಲಾಯಿಸಲು ಅರ್ಹರಾಗಿದ್ದಾರೆ.
ತಮಿಳುನಾಡು ರಾಜ್ಯದ ವಿಧಾನಸಭೆಗೆ ಏಪ್ರಿಲ್ 23 ರಂದು, ಪಶ್ಚಿಮಬಂಗಾಳದ ವಿಧಾನಸಭೆಗೆ ಏ. 29 ರಂದು ಚುನಾವಣೆ ನಡೆಯಲಿದ್ದು, ಈ ಪಂಚರಾಜ್ಯಗಳ ಚುನಾವಣಾ ಮತ ಎಣಿಕೆ ಮೇ 4 ರಂದು ನಡೆಯಲಿದೆ.

# ಸಚಿವ ಪ್ರಿಯಾಂಕ್ ಖರ್ಗೆ ಅವರಿಂದ ಶ್ಲಾಘನೆ

**ಕಲಬುರಗಿ,ಏ.8**-ಹೆಣ್ಣು ಮಕ್ಕಳನ್ನು ಪ್ರೋತ್ಸಾಹಿಸಲು ಹಾಗೂ ಅವರ ಭವಿಷ್ಯಕ್ಕೆ ನೇರವಾಗಲು "ಕುಮಾರಿ ಸಮೃದ್ಧಿ" ಹೆಸರಲ್ಲಿ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಹೂಲಿ ಗ್ರಾಮ ಪಂಚಾಯತಿ ಇತರ ಆಡಳಿತಗಳಿಗೆ ಮಾದರಿಯಾದ ಹಾಗೂ ಅನುಕರಣೀಯವಾಗಿರುವ ವಿಶೇಷ ಕಾರ್ಯಕ್ರಮವೊಂದನ್ನು ರೂಪಿಸಿರುವ ಕ್ರಮವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಶ್ಲಾಘಿಸಿದ್ದಾರೆ.
ಹೂಲಿ ಗ್ರಾಮದಲ್ಲಿ ಜನಿಸುವ ಪ್ರತಿ ಹೆಣ್ಣು ಮಕ್ಕಳ ಹೆಸರಲ್ಲಿ ಪಂಚಾಯತಿ ಕಡೆಯಿಂದ 5,500 ರೂ. ಠೇವಣಿ ಇರಿಸುವ ಮೂಲಕ, ಹೆಣ್ಣು ಮಕ್ಕಳ ಭವಿಷ್ಯಕ್ಕೆ ಆರ್ಥಿಕ ಭದ್ರತೆ ಒದಗಿಸಸುವ ಯೋಜನೆಯನ್ನು ರೂಪಿಸಿದ್ದು ಕರ್ನಾಟಕದಲ್ಲಿ ಇದೊಂದು ವಿನೂತನ ಕಾರ್ಯಕ್ರಮವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.
ಸ್ವಯಂ ಸರ್ಕಾರಗಳಾದ ಗ್ರಾಮ ಪಂಚಾಯತಿಗಳು ರಾಜ್ಯದಲ್ಲಿ ಕ್ರಿಯಾಶೀಲವಾಗಿ ತಮ್ಮದೇ ಆದ ವಿಶಿಷ್ಠ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಪ್ರೇರಣಾತ್ಮಕವಾಗಿ ಕೆಲಸ ಮಾಡುತ್ತಿವೆ,



ಸಮಾಜದಲ್ಲಿ ಹೆಣ್ಣು ಮಕ್ಕಳ ಬಗ್ಗೆ ಇರುವ ಪೂರ್ವಗ್ರಹವನ್ನು ನಿವಾರಿಸಲು ಹಾಗೂ ಹೆಣ್ಣುಮಕ್ಕಳ ಪೊ?ಷಕರಲ್ಲಿ ಆತ್ಮಸ್ಥೈರ್ಯ ತುಂಬಲು ಹೂಲಿ ಗ್ರಾಮ ಪಂಚಾಯತಿ ತೆಗೆದುಕೊಂಡಿರುವ ಈ ಐತಿಹಾಸಿಕ ನಿರ್ಧಾರ ರಾಜ್ಯದ ಇತರ ಗ್ರಾಮ ಪಂಚಾಯತಿಗಳಿಗೆ ಸ್ಫೂರ್ತಿಯಾಗಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆಶಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE